ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ
ಕನ್ನಡದಿನ ಪತ್ರಿಕೆ
ರಾಯಚೂರಿನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 125 | ದಿನಾಂಕ : 13-06-2026 ಶನಿವಾರ Date : 13-06-2026 Saturday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಕೋಲ್ಕತಾ ಸರ್ಕಾರಿ ಕಟ್ಟಡದಲ್ಲಿ ಅಗ್ನಿ ದುರಂತ: ಚುನಾವಣೆಯಲ್ಲಿ ಬಳಸಲಾಗಿದ್ದ 4,000 ಇವಿಎಂ ಭಸ್ಮ; ಅವಘಡದ ಸುತ್ತ ಅನುಮಾನದ ಹುತ್ತ!

**ಕೋಲ್ಕತ್ತಾ,ಜೂ.12-**ಕೋಲ್ಕತ್ತಾದ ಒಂಬತ್ತು ಅಂತಸ್ತಿನ ಸರ್ಕಾರಿ ಕಟ್ಟಡದಲ್ಲಿ ಬುಧವಾರ ಬೆಳಗ್ಗೆ ಕಚೇರಿಗಳು ಆರಂಭವಾಗುವ ಮುನ್ನ ಭಾರಿ ಬೆಂಕಿ ಕಾಣಿಸಿಕೊಂಡಿದ್ದು, ಬೆಂಕಿಯಲ್ಲಿ ಇತ್ತೀಚಿನ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಳಸಲಾಗಿದ್ದ ಸುಮಾರು 4,000 ಇವಿಎಂ ಸುಟ್ಟು ಭಸ್ಮವಾಗಿವೆ. ಹೀಗಾಗಿ ಅಗ್ನಿ ಅವಘಡ ಹಲವು ಅನುಮಾನಕ್ಕೆ ಕಾರಣವಾಗಿದೆ.

ದಕ್ಷಿಣ ಕೋಲ್ಕತ್ತಾದ ಅಲಿಪೋರ್ ಪ್ರದೇಶದಲ್ಲಿರುವ ಸರ್ಕಾರಿ ಕಟ್ಟಡದ ಮೂರನೇ ಮಹಡಿಯಲ್ಲಿ ಮೊದಲು ಬೆಂಕಿ ಕಾಣಿಸಿಕೊಂಡಿದ್ದು, ➘ 4

## ಶಿರಸಿ: ವಸತಿ ಶಾಲೆಯ ಶೌಚಾಲಯದಲ್ಲಿ ಮಗುವಿಗೆ ಜನ್ಮ ನೀಡಿದ 9ನೇ ತರಗತಿ ವಿದ್ಯಾರ್ಥಿನಿ

**ಶಿರಸಿ(ಉತ್ತರ ಕನ್ನಡ),ಜೂ.12-**ಶಿರಸಿ ತಾ ಲೂಕಿನ ವಸತಿ ಶಾಲೆಯೊಂದರಲ್ಲಿ 9ನೇ ತರಗ ತಿಯ ವಿದ್ಯಾರ್ಥಿನಿ(15 ವರ್ಷ) ಶಾಲೆಯ ಶೌಚಾ ಲಯದಲ್ಲಿಯೇ ಮಗುವೊಂದಕ್ಕೆ ಜನ್ಮ ನೀಡಿದ ಘಟನೆ ನಡೆದಿದೆ.

ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ವಸತಿ ಶಾಲೆಯಲ್ಲಿ ಶುಕ್ರವಾರ ಘಟನೆ ಜರುಗಿದ್ದು, ಬೆಳಗ್ಗೆ ಶಾಲಾ ಅವಧಿಯ ಆರಂಭದೊಳಗಡೆ ವಿದ್ಯಾರ್ಥಿನಿ ಸ್ವಯಂ ಹೆರಿಗೆ ಮಾಡಿಕೊಂಡಿದ್ದು, ನಂತರ ಮಗವನ್ನು ಶೌಚಾಲಯದ ಕಿಟಕಿಯಿಂದ ಹೊರಗಡೆ ಎಸೆದಿದ್ದಾಳೆ. ಮಗು ತಕ್ಷಣ ಮೃತಪಟ್ಟಿದ್ದು, ಶಾಲೆಯ ಹಿಂಭಾಗದಲ್ಲಿ ಸ್ವಚ್ಛತೆಗೆ ತೆರಳಿದ್ದ ವೇಳೆ ವಿಷಯ ಬೆಳಕಿಗೆ ಬಂದಿದೆ.

## ರೋಹಿಣಿ ಸಿಂಧೂರಿರೂಪಾ ಮೌದ್ಗಿಲ್ ಮಾನನಷ್ಟ ಪ್ರಕರಣದ ವಿಚಾರಣೆಗೆ ಸುಪ್ರೀಂ ಮಧ್ಯಂತರ ತಡೆ

**ನವದೆಹಲಿ,ಜೂ.12-**ಕರ್ನಾಟಕದ ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಮತ್ತು ಐಪಿಎಸ್ ಅಧಿಕಾರಿ ಡಿ. ರೂಪಾ ಮೌದ್ಗಿಲ್ ನಡುವಿನ ದೀರ್ಘಕಾಲದ ಮಾನನಷ್ಟ ಪ್ರಕರಣದ ವಿಚಾರಣೆಗೆ ಸುಪ್ರೀಂ ಕೋರ್ಟ್ ಮಧ್ಯಂತರ ತಡೆ ನೀಡಿದ್ದು, ಪ್ರಕರಣವನ್ನು ಮಧ್ಯಸ್ಥಿಕೆ ಮೂಲಕ ಬಗೆಹರಿಸಲು ಶುಕ್ರವಾರ ಆದೇಶಿಸಿದೆ.

ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ ಮತ್ತು ನ್ಯಾಯಮೂರ್ತಿ ಸಂಜೀವ್ ಸಚ್ ದೇವ ಅವರ ಪೀಠವು, ರೋಹಿಣಿ ಸಿಂಧೂರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿತು. ಈ ಅರ್ಜಿಯಲ್ಲಿ, ಡಿ. ರೂಪಾ ಮೌಡ್ಗಿಲ್ ಅವರು ದಾಖಲಿಸಿದ್ದ ಮಾನಹಾನಿ ಪ್ರಕರಣವನ್ನು ಪರಿಗಣಿಸಿದ ವಿಚಾರಣಾ ➘ 4

### ವೈದ್ಯಕೀಯ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದಿಂದ ಸಿಹಿ ಸುದ್ದಿ

# ಹೊಸದಾಗಿ ಶುಲ್ಕ ಹೆಚ್ಚಳ ಇಲ್ಲ, ಹಿಂದಿನದೇ ಅನ್ವಯ



**ಬೆಂಗಳೂರು,ಜೂ.12-**ಬೆಂಗಳೂರು: ವೈದ್ಯಕೀಯ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ಕೊಟ್ಟಿದೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ, ದಂತ ವೈದ್ಯಕೀಯ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕವನ್ನು ಹೆಚ್ಚಳ ಮಾಡದೇ ಯಥಾಸ್ಥಿತಿಯನ್ನೇ ಮುಂದುವರೆಸುವ ಮಹತ್ವದ ತೀರ್ಮಾನವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿದೆ.

ಸರ್ಕಾರದ ಇಂತಹ ನಿರ್ಧಾರದಿಂದಾಗಿ ಈ ಬಾರಿ ವೈದ್ಯಕೀಯ, ದಂತ ವೈದ್ಯಕೀಯ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕ ಹಚ್ಚಳವಾಗುತ್ತದೆ ಎಂಬ ಆತಂಕದಲ್ಲಿದ್ದ ವಿದ್ಯಾರ್ಥಿಗಳು ಹಾಗೂ ಪೋಷಕರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯವರೊಂದಿಗೆ ಶುಕ್ರವಾರ ವಿಕಾಸಸೌಧದಲ್ಲಿ ನಡೆದ ಸಭೆಯಲ್ಲಿ ಈ ಮಹತ್ವದ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ.

ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಶುಲ್ಕವನ್ನು ಹೆಚ್ಚಳ ಮಾಡಬೇಕೆಂಬ ಪ್ರಸ್ತಾವನೆಯನ್ನು ನಾವು ಒಪ್ಪಿಕೊಂಡಿಲ್ಲ. ಈ ಹಿಂದೆ ಅಂದರೆ 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿದ್ದ ಶುಲ್ಕವು ಯಥಾಸ್ಥಿತಿಯಲ್ಲೇ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದರು.

ಪೋಷಕರು ಮತ್ತು ವಿದ್ಯಾರ್ಥಿಗಳು ಶುಲ್ಕ ಹೆಚ್ಚಳವಾಗುತ್ತದೆ ಎಂಬ ಆತಂಕಕ್ಕೆ ಒಳಗಾಗಬಾರದು. ಈಗಾಗಲೇ ವೈದ್ಯಕೀಯ ಕೋಸ್‌ಗಳ ಪ್ರವೇಶಾತಿಗೆ ನಡೆದಿದ್ದ ನೀಟ್ ಪ್ರವೇಶ ಪರೀಕ್ಷೆ ರದ್ದಾಗಿ ➘ 4

- **ಎಂಬಿಬಿಎಸ್ ಶುಲ್ಕ ವಿವರ:**
  - ಸರ್ಕಾರಿ ಕಾಲೇಜು - 55,000 ರೂ.
  - ಕೆಪಿಸಿಎಫ್ ಸರ್ಕಾರಿ ಕೋಟಾ - 1,41,621 ರೂ.
  - ಕೆಆರ್‌ಎಲ್‌ಎಂಪಿಸಿಎ ಸರ್ಕಾರಿ ಕೋಟಾ - 1,41,621 ರೂ.
  - ಎಎಂಪಿಸಿಕೆ ಸರ್ಕಾರಿ ಕೋಟಾ - 1,41,621 ರೂ.
- **ಖಾಸಗಿ ವಿಶ್ವವಿದ್ಯಾನಿಲಯ:**
  - ಸರ್ಕಾರಿ ಕೋಟಾ 1,41,621 ರೂ.
  - ಕೆಪಿಸಿಎಫ್ ಖಾಸಗಿ ಕೋಟಾ - 11,88,167 ರೂ.
  - ಕೆಆರ್‌ಎಲ್‌ಎಂಪಿಸಿಎ ಖಾಸಗಿ ಕೋಟಾ - 11,88,167 ರೂ.
  - ಎಎಂಪಿಸಿಕೆ ಖಾಸಗಿ ಕೋಟಾ - 11,88,167 ರೂ.
- **ದಂತ ವೈದ್ಯಕೀಯ:**
  - ಸರ್ಕಾರಿ ಕಾಲೇಜುಗಳ ಕೋಟಾ - 40,000 ರೂ.
  - ಕೆಪಿಸಿಎಫ್ ಸರ್ಕಾರಿ ಕೋಟಾ - 83,358 ರೂ.
  - ಕೆಆರ್‌ಎಲ್‌ಎಂಪಿಸಿಎ ಸರ್ಕಾರಿ ಕೋಟಾ - 83,358 ರೂ.
  - ಎಎಂಪಿಸಿಕೆ ಸರ್ಕಾರಿ ಕೋಟಾ - 83,358 ರೂ.
- **ಖಾಸಗಿ ಕೋಟ:**
  - ಕೆಪಿಸಿಎಫ್ ಖಾಸಗಿ ಕೋಟಾ - 7,32,625 ರೂ.
  - ಕೆಆರ್‌ಎಲ್‌ಎಂಪಿಸಿಎ ಖಾಸಗಿ ಕೋಟಾ - 7,32,625 ರೂ.
  - ಎಎಂಪಿಸಿಕೆ ಖಾಸಗಿ ಕೋಟಾ - 7,32,625 ರೂ.

# ಡೀಸೆಲ್ ಮಾರಾಟ-ದಿನಕ್ಕೆ ಪ್ರತಿ ವಾಹನಕ್ಕೆ 200 ಲೀಟರ್‌ಗೆ ಮಿತಿಗೊಳಿಸಿದ ಕೇಂದ್ರ

### ಕಾಳಸಂತೆ ಮಾರಾಟ ತಡೆಯಲು ಮಹತ್ವದ ನಿರ್ಧಾರ!



**ನವದೆಹಲಿ,.ಜೂ.12-**ಇಂಧನ ಪೂರೈಕೆಯನ್ನು ಸಮರ್ಪಕವಾಗಿ ನಿರ್ವಹಿಸಲು ಮತ್ತು ಕಾಳಸಂತೆ ಮಾರಾಟವನ್ನು ತಡೆಯಲು ಸರ್ಕಾರವು, ಪ್ರತಿವಾಹನಕ್ಕೆ ದಿನವೊಂದಕ್ಕೆ 200 ಲೀಟರ್ ಡೀಸೆಲ್ ಮಾತ್ರವೇ ಮಾರಾಟ ಮಾಡುವಂತೆ ನಿರ್ಬಂಧ ವಿಧಿಸಿದೆ. ಪೆಟ್ರೋಲ್ ಬಂಕ್‌ಗಳ ಮೂಲಕ ದೊಡ್ಡ ಪ್ರಮಾಣದ (ಬಲ್ಕ್) ಬಳಕೆದಾರರು ಇಂಧನ ಖರೀದಿಸುವುದನ್ನು ನಿಷೇಧಿಸಿದೆ. ಡೀಸೆಲ್ ಮಾರಾಟವನ್ನು ದಿನಕ್ಕೆ ಪ್ರತಿ ವಾಹನಕ್ಕೆ 200 ಲೀಟರ್‌ಗೆ ಮಿತಿಗೊಳಿಸಲಾಗಿದೆ.

ಕೈಗಾರಿಕಾ, ವಾಣಿಜ್ಯ ಮತ್ತು ಸಾಂಸ್ಥಿಕ ಬಳಕೆದಾರರು ಪೆಟ್ರೋಲ್ ಪಂಪ್‌ಗಳಿಂದ ಪೆಟ್ರೋಲ್ ಮತ್ತು ಡೀಸೆಲ್ ಖರೀದಿಸುವುದನ್ನು ನಿರ್ಬಂಧಿಸಿದೆ ಎಂದು ಸರ್ಕಾರದ ಅಧಿಕೃತ ಆದೇಶವೊಂದು ತಿಳಿಸಿದೆ. ಚಿಲ್ಲರೆ ಮಾರಾಟ ಮಳಿಗೆಗಳು ಡೀಸೆಲ್ ಅನ್ನು ವಾಹನ ಟ್ಯಾಂಕ್ ಅಥವಾ ಕಉಖಣ-ಅನುಮೋದಿತ ಕಂಟೇನರ್‌ಗೆ ಮಾತ್ರ ಮಾರಾಟ ಮಾಡಬಹುದು. ಪ್ರತಿ ಗ್ರಾಹಕ ಅಥವಾ ವಾಹನಕ್ಕೆ ದಿನಕ್ಕೆ 200 ಲೀಟರ್‌ಗಳಿಗಿಂತ ಹೆಚ್ಚು ಡೀಸೆಲ್ ಹಾಕುವಂತಿಲ್ಲ.

ಅಲ್ಲದೇ, ಕೈಗಾರಿಕಾ, ವಾಣಿಜ್ಯ ಮತ್ತು ಸಾಂಸ್ಥಿಕ ಗ್ರಾಹಕರು ಇನ್ನು ಮುಂದೆ ಚಿಲ್ಲರೆ ಮಾರಾಟ ಮಳಿಗೆಗಳಿಂ ದ ಪೆಟ್ರೋಲ್ ಅಥವಾ ಡೀಸೆಲ್ ಖರೀದಿಸಲು ಅನುಮತಿಸಲಾಗುವುದಿಲ್ಲ.

ಅವರು ತಮ್ಮ ಸ್ವಂತ ಗ್ರಾಹಕ ಪಂಪ್‌ಗಳಿಂದ ಇಂಧನವನ್ನು ಪಡೆಯಬೇಕು. ಬೆಲೆ ವ್ಯತ್ಯಾಸದಿಂದಾಗಿ ಬೃಹತ್ ಬಳಕೆದಾರರು ಪೆಟ್ರೋಲ್ ಪಂಪ್‌ಗಳಿಂದ ಇಂಧನವನ್ನು ಖರೀದಿಸಲು ಪ್ರಾರಂಭಿಸಿದ ನಂತರ ಕೆಲವು ಬಂಕ್‌ಗಳಲ್ಲಿ ಅಸಹಜ ➘ 4

- **ಹೊಸ ನಿಯಮ ಏನು?**
  - ಪ್ರತಿಯೊಂದು ವಾಹನಕ್ಕೆ ದಿನಕ್ಕೆ ಗರಿಷ್ಠ 200 ಲೀಟರ್ ಡೀಸೆಲ್ ಮಾತ್ರ
  - ಕಾಳಸಂತೆ ಮತ್ತು ಅಕ್ರಮ ಸಂಗ್ರಹಣೆ ತಡೆಗೆ ಕ್ರಮ
  - ಪೆಟ್ರೋಲ್ ಬಂಕ್‌ಗಳಲ್ಲಿ ಬೃಹತ್ ಖರೀದಿಗೆ ನಿರ್ಬಂಧ
- **ಯಾರಿಗೆ ನಿರ್ಬಂಧ?**
  - ಕೈಗಾರಿಕಾ ಬಳಕೆದಾರರು
  - ವಾಣಿಜ್ಯ ಸಂಸ್ಥೆಗಳು, ಸಾಂಸ್ಥಿಕ ಗ್ರಾಹಕರು
  - ಇವರು ಚಿಲ್ಲರೆ ಪೆಟ್ರೋಲ್ ಬಂಕ್‌ಗಳಿಂದ ಇಂಧನ ಖರೀದಿಸಲು ಅವಕಾಶ ಇಲ್ಲ
- **ಡೀಸೆಲ್ ಮಾರಾಟದ ನಿಯಮಗಳು**
  - ವಾಹನದ ಟ್ಯಾಂಕ್‌ಗೆ ಮಾತ್ರ ಡೀಸೆಲ್ ಪೂರೈಕೆ
  - PESO ಅನುಮೋದಿತ ಕಂಟೇನರ್‌ಗಳಿಗೆ ಮಾತ್ರ ಮಾರಾಟ
  - ದಿನಕ್ಕೆ ಒಬ್ಬ ಗ್ರಾಹಕ/ವಾಹನಕ್ಕೆ 200 ಲೀಟರ್ ಮಿತಿ
- **ಆದೇಶ ಜಾರಿ ಅವಧಿ**
  - ಹೊಸ ನಿಯಮ 90 ದಿನಗಳವರೆಗೆ ಜಾರಿ
  - ಅಗತ್ಯವಿದ್ದರೆ ಸರ್ಕಾರದಿಂದ ಮುಂದುವರಿಕೆ ಸಾಧ್ಯ
  - ತೈಲ ಮಾರುಕಟ್ಟೆ ಕಂಪನಿಗಳಿಗೆ ಜಾರಿ ಅಧಿಕಾರ
- **ಸರ್ಕಾರದ ಕಾರಣಗಳು**
  - ಇಂಧನ ಪೂರೈಕೆಯನ್ನು ಸಮರ್ಪಕವಾಗಿ ನಿರ್ವಹಣೆ

## ಬಾಲಕಾರ್ಮಿಕತೆ ನಿರ್ಮೂಲನೆಗೆ ಎಲ್ಲರ ಸಹಕಾರವೂ ಅಗತ್ಯ- ನ್ಯಾ.ಸಿದ್ದರಾಮಪ್ಪ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.12-**ಸಮಾಜದಲ್ಲಿ ಬೇರು ಬಿಟ್ಟಿರುವ ಹಲವು ಸಾಮಾಜಿಕ ಪಿಡುಗುಗಳಿಗೆ ಶಿಕ್ಷಣವೇ ಅಸ್ತ್ರ. ಅದರಂತೆ ಬಾಲಕಾರ್ಮಿಕ ಪದ್ಧತಿ ನಿವಾರಣೆಯಾಗಬೇಕಾದರೆ ಎಲ್ಲರಿಗೂ ಶಿಕ್ಷಣ ಸಿಗುವಂತಾಗಬೇಕು. ಅರಿವಿನ ಕೊರತೆಯಿಂದಾಗಿಯೇ ಇಂತಹ ಪದ್ಧತಿಗಳು ಇಂದಿಗೂ ಜೀವಂತವಾಗಿವೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೋಲಿಸ್ ಇಲಾಖೆ, ಮಹಾನಗರ

## ತ್ರೈಮಾಸಿಕ ತಾಲೂಕ ಕೆಡಿಪಿ ಸಭೆ: ನಕಲಿ ಬೀಜ, ಹೆಚ್ಚುವರಿ ಬೆಲೆಗೆ ಮಾರಾಟ ಮಾಡುವ ಮಾರಾಟಗಾರರ ವಿರುದ್ದ ಕೇಸ್ ದಾಖಲಿಸಿ-ದದ್ದಲ ತಾಕೀತು





■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.12-ತಾಲೂಕಿನಲ್ಲಿ ನಕಲಿ ಬಿತ್ತನೆ ಬೀಜಗಳ ಮಾರಾಟ ಕಂಡುಬಂದಲ್ಲಿ, ಮಾರಾಟ ಮಾಡಿದ ಅಂಗಡಿಮಾಲೀಕರು ಮತ್ತು ಪೂರೈಸಿದ ಕಂಪನಿವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಿ. ಪೊಲೀಸ್ ಇಲಾಖೆ, ತಹಸೀಲ್ದಾರೊಂದಿಗೆ ಅಂಗಡಿ ಮೇಲೆ ದಾಳಿ ನಡೆಸಿ, ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.**

ಅವರಿಂದು ನಗರದ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ಬಾರಿ ಮುಂಗಾರು ಹಂಗಾಮಿನ ಕುರಿತು ರೈತರಿಗೆ, ಬಿತ್ತನೆ ಹಾಗೂ ಇತರೆ ಕೃಷಿ ಚಟುವಟಿಕೆಗಳ ಕುರಿತು ಮಾಹಿತಿ ಒದಗಿಸಬೇಕು. ತಾಲೂಕು ವ್ಯಾಪ್ತಿಯಲ್ಲಿ ಬಹುತೇಕ ಅಂಗಡಿಗಳಲ್ಲಿ ಬಿತ್ತನೆ ಬೀಜ ಕಳಪೆ ಮಟ್ಟದಿಂದ ಕೂಡಿರುವುದಾಗಿ ಮತ್ತು. ನಕಲಿ ಬಿತ್ತನೆ ಬೀಜ ಮಾರಾಟ ಮಾಡುತ್ತಿರುವುದಾಗಿ ದೂರುಗಳು ಕೇಳಿ ಬರುತ್ತಿದ್ದು, ಇದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತದೆ. ಬಿತ್ತನೆ ಮಾಡಿದ ನಾಲ್ಕೈದು ತಿಂಗಳುಗಳ ವರೆಗೆ ರೈತರಿಗೆ ನಕಲಿ ಬಿತ್ತನೆ ಬೀಜ ಎಂಬುವುದು ತಿಳಿಯುವುದಿಲ್ಲ. ಇದರಿಂದ ರೈತರು ಸಾಕಷ್ಟು ಆರ್ಥಿಕ ಸಂಕಷ್ಟ ಎದುರಿಸಬೇಕಾಗುತ್ತದೆ. ಅದಕ್ಕಾಗಿ ಕೃಷಿ ಇಲಾಖೆಯ ಅಧಿಕಾರಿಗಳು ಈ ಬಗ್ಗೆ ಸೂಕ್ರಮ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ನಕಲಿ ಬಿತ್ತನೆ ಬೀಜ ಹಾಗೂ ಬೇರೆ ರಾಜ್ಯಗಳಿಗೆ ಅಕ್ರಮವಾಗಿ ರಸಗೊಬ್ಬರ ಮಾರಾಟ ಮಾಡುತ್ತಿರುವ

## ಜೋಳ ಖರೀಧಿಸಿಹಣ ಬಾಕಿ, ರಸಗೊಬ್ಬರ ಕೊರತೆ ಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜೂ.16 ರಂದು ರೈತರ ಪ್ರತಿಭಟನೆ- ಚಾಮರಸ ಮಾಲಿಪಾಟೀಲ್



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.13-**ಜೋಳ ಖರೀಧಿ ಬಾಕಿ ಹಣಪಾವತಿ, ರಸಗೊಬ್ಬರ ಕೊರತೆ ಹಾಗೂ ಕಳಪೆ ಬೀಜ ಮಾರಾಟ ತಡೆಯುವದು ಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜಿಲ್ಲಾಡಳಿತ ಗಮನಕ್ಕೆ ತಂದರೂ ಯಾವುದೇ ಸ್ಪಂದನೆ ದೊರೆಯದೇಇರುವದಿರಂದ ಜೂ.16 ರಂದು ಕರ್ನಾಟಕ ರಾಜ್ಯ ರೈತ ಸಂಘ ಬೃಹತ್ ಪ್ರತಿಬಟನೆ ನಡೆಸಲು ನಿರ್ಧರಿಸಿದೆ ಎಂದು ರಾಜ್ಯಗೌರವಾಧ್ಯಕ್ಷ ಚಾಮರಸಮಾಲಿ ಪಾಟೀಲ್ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ರೈತರಿಂದ ಖರೀದಿಸಿದ ಜೋಳದಹಣ ಇಂದಿಗೂ ಪಾವತಿಯಾಗಿಲ್ಲ. ಶೇ.85 ರಷ್ಟು ರೈತರಿಗೆಹಣ ಬಾಕಿಯಿದೆ. ಜಿಲ್ಲಾಧಿಕಾರಿಗಳಿಗೆ ಕುರಿತು ದೂರು ನೀಡಿದ್ದು ವಾರದೊಳಗೆ ಇತ್ಯರ್ಥಪಡಿಸುವದಾಗಿ ಭರವಸೆ ನೀಡಿದ್ದರು. ಆದರೆ ಇಂದಿಗೂ ಬಾಕಿ ಹಣ ಪಾವತಿಯಾಗಿಲ್ಲ. ಜಿಲ್ಲೆಯಲ್ಲಿ 12 ಲಕ್ಷ 50 ಸಾವಿರ ಕ್ವಿಂಟಾಲ್ ಜೋಳ ಖರೀಧಿ ಮಾಡಲಾಗಿದ್ದು, 10 ವರೆ ಲಕ್ಷ ಕ್ವಿಂಟಾಲ್ ಹಣ ಬಾಕಿಯಿದೆ. ಮುಂಗಾರುಪ್ರಾರಂಭವಾಗಿದ್ದು ಬೀಜ, ರಸಗೊಬ್ಬರ ಖರೀಧಿಸಲು ರೈತರ ಬಳಿ ಹಣವಿಲ್ಲದ ಸ್ಥಿತಿಯಿಂದ ಬಡ್ಡಿ ಸಾಲದ ಮೊರೆ ಹೋಗುವ ಸ್ಥಿತಿಯನ್ನು ಸರ್ಕಾರ ನಿರ್ಮಾಣ ಮಾಡಿದೆ ಎಂದು ಆರೋಪಿಸಿದರು. ಹತ್ತಿ ಖರೀಧಿ ಮಾಡಿರುವ ಸರ್ಕಾರ ಒಂದು ವಾರದಲ್ಲಿ ರೈತರಿಗೆ ಹಣ ನೀಡಿದೆ. ಆದರೆ ಜೋಳ ಖರೀಧಿ ಮಾಡಿದ ಹಣ ಮಾತ್ರ ಪಾವತಿ ಮಾಡುತ್ತಿಲ್ಲ. ಮುಂಗಾರು ಪ್ರಾರಂಭವಾಗುತ್ತಿದ್ದು ರಸಗೊಬ್ಬರ ➘ 4

## ಅನಧಿಕೃತ ತರಕಾರಿ ಮಾರಾಟ ಕೇಂದ್ರದಿಂದು ಒಂದು ಕೋಟಿ ಆರ್ಥಿಕ ನಷ್ಟ: ರವೀಂದ್ರ ಜಲ್ದಾರ ವಿರುದ್ಧ ಕ್ರಮಕ್ಕೆ ಎನ್.ಮಹಾವೀರ ಆಗ್ರಹ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.13-**ನಗರದಲ್ಲಿ ಅನಧಿಕೃತ ತರಕಾರಿ ಮಾರಾಟದಿಂದ ನಗರ ಪಾಲಿಕೆ ಒಂದು ಕೋಟಿ ಆರ್ಥಿಕ ನಷ್ಟವಾಗಿದ್ದು ರವೀಂದ್ರ, ಜಲ್ದಾರ ನೇರ ಹೊಣೆಯಾಗಿದ್ದು ಪಾಲಿಕೆ ಆರ್ಥಿಕ ನಷ್ಟ ವಸೂಲಿ ಮಾಡಬೇಕೆಂದು ಉಸ್ಮಾನೀಯ ತರಕಾರಿ ಮಾರುಕಟ್ಟೆಯ ಎಸ್ಸಿಎಸ್ಸಿ, ಹಿಂದುಳಿದ ವರ್ಗಗಳ ಮಾರಾಟಗಾರರ ಸಂಘದ ಅಧ್ಯಕ್ಷ ಎನ್.ಮಹಾವೀರ ಆಗ್ರಹಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಅನಧಿಕೃತ ಮಾರಾಟ ಕೇಂದ್ರ ತೆರವು ಮಾಡಲು ಹೋದಾಗ ರೈತರೇ ಅಲ್ಲ ವ್ಯಕ್ತಿ ಮೈಮೇಲೆ ಪೆಟ್ರೋಲ್ ಹಾಕಿಕೊಳ್ಳಲು ಯತ್ನಿಸಿದ ಘಟನೆ ಜರುಗಿದೆ. ಆಡಳಿತ ಯಾರದೋ ಬೆದರಿಕೆ ಹೆದರಿ ತೆರವು ಕಾರ್ಯ ನಡೆಸುತ್ತಿಲ್ಲ. ಜಿಲ್ಲಾಧಿಕಾರಿಗಳಿಗೆ ದೂರು ನೀಡಿದರೆ ವಿವಾದವಿದೆ ಎಂದುಹೇಳುತ್ತಿದ್ದಾರೆ ಹೊರತು ತೆರವಿಗೆ ಮುಂದಾಗುತ್ತಿಲ್ಲ. ಇಮ್ರಾನ್ ಎಂಬ ವ್ಯಕ್ತಿ ಖಾಸಗಿ ಭೂಮಿಯನ್ನು ಜಾಗ ಬಾಡಿಗೆ ಪಡೆದು ತರಕಾರಿ ಮಾರಾಟ ಮಾಡಲಾಗುತ್ತಿದೆ. ಕಳೆದ ಐದು ವರ್ಷದಿಂದ ಪಾಲಿಕೆ ಆದಾಯಕ್ಕೆ ಖೋತಾಗುತ್ತಿದ್ದರೂ ತಡೆಯುವ ಕೆಲಸವಾಗುತ್ತಿಲ್ಲ. ಅನೇಕ ಕ್ರಿಮಿನಲ್ ಪ್ರಕರಣಗಳಲ್ಲಿ ಆರೋಪಿಯಾಗಿರುವ ರವೀಂದ್ರ, ಜಲ್ದಾರ ➘ 4

## ಮಕ್ಕಳು ಹಕ್ಕು ಆಯೋಗ ಅಧ್ಯಕ್ಷ ಸದಸ್ಯರ ನೇಮಕಾತಿಯಲ್ಲಿ ನಿಯಮ ಉಲ್ಲಂಘನೆ: ನೇಮಕಾತಿ ಹಿಂಪಡೆಯಲು ಜೆ.ಬಿ.ರಾಜು ಆಗ್ರಹ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.12-**ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರ ನೇಮಕಾತಿಯಲ್ಲಿ ನೇಮಕಾತಿ ಉಲ್ಲಂಘನೆ, ಅನರ್ಹರನ್ನು ನೇಮಿಸಲಾಗಿದ್ದು ಕೂಡಲೇ ರದ್ದುಪಡಿಸಬೇಕೆಂದು ಜನಪರ ಸಂಘಟನೆಗಳ ವೇದಿಕೆ ಸಂಚಾಲಕ ಜೆ.ಬಿ.ರಾಜು ಆಗ್ರಹಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ,ರಾಜ್ಯ ಮಕ್ಕಳ ಆಯೋಗ ಕಾಯ್ದೆ 2005 ರ ಅಡಿಯಲ್ಲಿ ಸ್ಥಾಪಿಸಲಾದ ಕಾನೂನು ಬದ್ದ ಸಂಸ್ಥೆಯಾಗಿದೆ. ಅಧ್ಯಕ್ಷರು ಹಾಗೂ ಸದಸ್ಯರ ನೇಮಕಾತಿ ಸಂದರ್ಬದಲ್ಲಿ ಹತ್ತು ವರ್ಷಗಳ ಮಕ್ಕಳ ಕಲ್ಯಾಣ, ಹಕ್ಕುಗಳ ರಕ್ಷಣೆ ಕುರಿತಾಗಿಸೇವಾನುಭವ ಹೊಂದಿರಬೇಕು. ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಸೇವಾ ಮಾಡಿರುವ ಸಾಧನೆಗಳಿರಬೇಕು. ಆದರೆ ಮೇ.27 ರಂದು ರಾಜ್ಯ ಸರ್ಕಾರ ಹೊರಡಿಸಿರುವ ಅಧಿಸೂಚನೆಯಲ್ಲಿ ಅರ್ಹತಾ ಮಾನದಂಡಗಳನು ಹೊಂದಿರದೇ ಇರುವವ್ಯಕ್ತಿಗಳನ್ನು ನೇಮಿಸಿರುವ ಅವೈಜ್ಞಾನಿಕ, ನಿಯಮಬಾಹಿರವಾಗಿದೆ.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧೀನ ಕಾರ್ಯದರ್ಶಿಗಳು ಮಕ್ಕಳ ಆಯೋಗದ ಅಧ್ಯಕ್ಷರನ್ನಾಗಿ ಕಲ್ಬುರ್ಗಿಯ ಸಂತೋಷಕುಮಾರ ಹಾಗೂ ಸದಸ್ಯರಾಗಿ

# ಎಸ್ಐಆರ್ ವಿರುದ್ಧ ಸಂಘಟನೆಗಳ ಒಗ್ಗಟ್ಟು; ಯಾದಗಿರಿಯಲ್ಲಿ ಜೂ.15ರಂದು ಜನಜಾಗೃತಿ ಅಭಿಯಾನಕ್ಕೆ ಸಜ್ಜು

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.13**-ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯ ವಿರುದ್ಧ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಎದ್ದೇಳು ಕರ್ನಾಟಕ ನೇತೃತ್ವದಲ್ಲಿ ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿರುವ ಎಸ್ಐಆರ್ ವಿರೋಧಿ ಜನಜಾಗೃತಿ ಜಾಥಾ ಜೂನ್ 15ರಂದು ಯಾದಗಿರಿ ನಗರಕ್ಕೆ ಆಗಮಿಸಲಿದ್ದು, ಜಾಥಾವನ್ನು ಯಶಸ್ವಿಗೊಳಿಸುವ ಸಂಬಂಧ ನಗರದ ಹಳೆ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಪೂರ್ವಭಾವಿ ಸಮಾಲೋಚನಾ ಸಭೆ ನಡೆಯಿತು.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆಯುತ್ತಿರುವ ಈ ಜಾಥಾ ಜೂನ್ 13ರಂದು ಬೀದರ್ ಜಿಲ್ಲೆಯಿಂದ ಆರಂಭವಾಗಿ, ಜೂನ್ 14ರಂದು ಕಲಬುರಗಿಯಲ್ಲಿ ಕಾರ್ಯಕ್ರಮಗಳನ್ನು ನಡೆಸಿ, ಜೂನ್ 15ರಂದು ಯಾದಗಿರಿ ಜಿಲ್ಲೆಗೆ ಪ್ರವೇಶಿಸಲಿದೆ. ಈ ಹಿನ್ನೆಲೆಯಲ್ಲಿ ವಿವಿಧ ಪ್ರಗತಿಪರ, ರೈತ, ಕಾರ್ಮಿಕ, ಅಲ್ಪಸಂಖ್ಯಾತ ಹಾಗೂ ಸಾಮಾಜಿಕ ಸಂಘಟನೆಗಳ ಮುಖಂಡರು ಸಭೆಯಲ್ಲಿ ಭಾಗವಹಿಸಿ ಜಾಥಾದ ಕಾರ್ಯಕ್ರಮಗಳ ರೂಪುರೇಷೆಗಳನ್ನು ಅಂತಿಮಗೊಳಿಸಿದರು.

ಸಭೆಯನ್ನುದ್ದೇಶಿಸಿ ದಲಿತ ಸಂಘರ್ಷ ಸಮಿತಿಯ ಹಿರಿಯ ಮುಖಂಡ ಮರೆಪ್ಪ ಚಟ್ಟೇಕರ್ ಮಾತನಾಡಿ, ಎಸ್ಐಆರ್ ಪ್ರಕ್ರಿಯೆಯಿಂದ ಮತದಾರರ ಹಕ್ಕುಗಳಿಗೆ ಧಕ್ಕೆಯಾಗುವ ಸಾಧ್ಯತೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು. ಚುನಾವಣಾ ಆಯೋಗವು ದೇಶಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯವನ್ನು ಕೈಗೊಂಡಿದ್ದು, ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ಈ ಪ್ರಕ್ರಿಯೆ ಜಾರಿಯಾಗುತ್ತಿದೆ. ಮತದಾರರ ಪಟ್ಟಿಯಲ್ಲಿನ ಅರ್ಹರ ಹೆಸರು ಉಳಿಯಬೇಕು ಹಾಗೂ ಅನರ್ಹರ ಹೆಸರುಗಳು



ಸೇರ್ಪಡೆಯಾಗಬಾರದು ಎಂಬ ಉದ್ದೇಶವನ್ನು ಚುನಾವಣಾ ಆಯೋಗ ಹೊಂದಿದೆ.

ಜಾಥಾದ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದ ಅವರು, ಜೂನ್ 15ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಲಾಗುವುದು. ನಂತರ ಬೈಕ್ ರ್ಯಾಲಿ ಮೂಲಕ ನಗರದ ಗಾಂಧಿ ಚೌಕ್‌ಗೆ ತೆರಳಿ ಮಹಾತ್ಮ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಲಾಗುವುದು. ಇದೇ ಸಂದರ್ಭದಲ್ಲಿ ಎಸ್ಐಆರ್ ಕುರಿತು ಮಾಹಿತಿ ಒಳಗೊಂಡ ಕರಪತ್ರಗಳನ್ನು ಸಾರ್ವಜನಿಕರಿಗೆ ಹಂಚಿ, ಅದರ ಪರಿಣಾಮಗಳ ಕುರಿತು ಪ್ರಮುಖ ಮುಖಂಡರು ಮಾತನಾಡಲಿದ್ದಾರೆ' ಎಂದು ತಿಳಿಸಿದರು.

ಬಳಿಕ ಜಾಥಾ ಅಂಬೇಡ್ಕರ್ ವೃತ್ತಕ್ಕೆ ತೆರಳಿ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಲಿದೆ. ಅಲ್ಲಿಯೂ ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ, ಅದರ ಉದ್ದೇಶಗಳು ಹಾಗೂ ವಿವಿಧ ಸಂಘಟನೆಗಳು ವ್ಯಕ್ತಪಡಿಸುತ್ತಿರುವ ಆತಂಕಗಳ ಕುರಿತು ಜನರಿಗೆ ಮಾಹಿತಿ ನೀಡಲಾಗುವುದು. ಎಸ್ಐಆರ್ ಪ್ರಕ್ರಿಯೆ ಮತದಾರರ ಪಟ್ಟಿಯನ್ನು ಮರುಪರಿಶೀಲಿಸುವ ಮತ್ತು ಪರಿಷ್ಕರಿಸುವ ರಾಷ್ಟ್ರವ್ಯಾಪಿ ಅಭಿಯಾನದ ಭಾಗವಾಗಿದೆ ಎಂದು ಅವರು ಹೇಳಿದರು.

'ನಂತರ ಸುಭಾಷ್ ವೃತ್ತದಲ್ಲಿ ಸಾರ್ವಜನಿಕ ಸಮಾವೇಶ ಆಯೋಜಿಸಲಾಗಿದ್ದು, ಎಸ್ಐಆರ್ ಕುರಿತು ಬಹಿರಂಗ ಚರ್ಚೆ ನಡೆಯಲಿದೆ. ಸಮಾವೇಶದಲ್ಲಿ ವಿವಿಧ ಸಂಘಟನೆಗಳ ಮುಖಂಡರು, ಸಾಮಾಜಿಕ ಕಾರ್ಯಕರ್ತರು ಹಾಗೂ ಚಿಂತಕರು ಭಾಗವಹಿಸಿ ಪ್ರಜಾಪ್ರಭುತ್ವದ ಹಕ್ಕುಗಳು, ಮತದಾನದ

ಮಹತ್ವ ಹಾಗೂ ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಕುರಿತು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಲಿದ್ದಾರೆ' ಎಂದರು.

ಅಲ್ಲಿಂದ ಹಳೆಯ ಪ್ರವಾಸಿ ಮಂದಿರದಲ್ಲಿ ಮತ್ತೊಂದು ಸಮಾಲೋಚನಾ ಸಭೆ ನಡೆಸಿ, ಜೂನ್ 20ರಂದು ಬೆಂಗಳೂರಿನಲ್ಲಿ ನಡೆಯಲಿರುವ ರಾಜ್ಯಮಟ್ಟದ ಸಮಾವೇಶದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಕುರಿತು ಚರ್ಚಿಸಲಾಗುವುದು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ವ್ಯಾಪಕ ಜನಸಂಪರ್ಕ ನಡೆಸುವ ಮೂಲಕ ರಾಜ್ಯಮಟ್ಟದ ಹೋರಾಟಕ್ಕೆ ಬೆಂಬಲ ಸಂಗ್ರಹಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ನಂತರ ಜಾಥಾ ಶಹಾಪುರ ನಗರಕ್ಕೆ ತೆರಳಿ ಅಂಬೇಡ್ಕರ್ ಪ್ರತಿಮೆ ಬಳಿ ಕರಪತ್ರ ವಿತರಣೆ ನಡೆಸಲಿದೆ. ಅಲ್ಲಿಂದ ಬಸವೇಶ್ವರ ವೃತ್ತದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಎಸ್ಐಆರ್ ಕುರಿತು ಮಾಹಿತಿ ನೀಡಿ ಜನಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಮತದಾರರೂ ಎಚ್ಚರಿಕೆಯಿಂದ ಭಾಗವಹಿಸಿ ತಮ್ಮ ಹೆಸರುಗಳು ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಇದೇ ವೇಳೆ ದಸಂಸ ಹಿರಿಯ ಮುಖಂಡರಾದ ಮಾನಪ್ಪ ಕಟ್ಟಿಮನಿ, ಕಾಶೀನಾಥ ನಾಟೇಕರ್, ಜಾಮತ್ ಸಂಘದ ಮುಖಂಡ ಮಹಮ್ಮದ್ ಸಲೀಂ, ರೈತ ಮುಖಂಡ ಫಕೀರ್ ಅಹಮ್ಮದ್, ಡಾ. ರೆಡ್‌ಷನ್ ನಾಲವಾರ, ಮಹಮ್ಮದ್ ವಾಸೆ ಹಾಗೂ ಶರಣಗೌಡ ಪಾಟೀಲ ಮಾತನಾಡಿ ಜಾಥಾದ ಉದ್ದೇಶಗಳು ಮತ್ತು ಜನಜಾಗೃತಿಯ ಅಗತ್ಯತೆಯ ಕುರಿತು ಅಭಿಪ್ರಾಯ ವ್ಯಕ್ತಪಡಿಸಿದರು.

ಸಭೆಯಲ್ಲಿ ಪರಶುರಾಮ, ಸೈದಪ್ಪ ಕೊಲ್ಲೂರು, ಭೀಮರಾಯ ಹೊಸಮನಿ, ಗೋಪಾಲ ಕೆಳಗೇರಿ, ನಿಂಗಪ್ಪ ಕೊಲ್ಲೂರು, ಬಾಲರಾಜ ಕಾನಾಪುರ, ಮಲ್ಲೇಶ ಅನುಸುರ್ಗೂ, ನಿಂಗಪ್ಪ ಅನುಸುರ್ಗೂ, ಸಾಬಣ್ಣ ಎಡಳ್, ನಿಂಗಪ್ಪ ಬೀರನಾಳ, ಶರಬು ವಡಗೇರಾ, ಹಣಮಂತ ಗುರಸುಣಗಿ ಸೇರಿದಂತೆ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು, ಚಿಂತಕರು, ಸಾಹಿತಿಗಳು, ಯುವ ಸಂಘಟನೆಗಳ ಪ್ರತಿನಿಧಿಗಳು, ಅಲ್ಪಸಂಖ್ಯಾತ ಸಮುದಾಯದ ಮುಖಂಡರು, ಕೂಲಿ ಕಾರ್ಮಿಕರ ಸಂಘಟನೆಗಳ ಪದಾಧಿಕಾರಿಗಳು, ಜಮಾತ್ ಸಂಘಟನೆಗಳ ಪ್ರತಿನಿಧಿಗಳು, ರೈತ ಪರ ಸಂಘಟನೆಗಳ ಮುಖಂಡರು ಹಾಗೂ ಸಾಮಾಜಿಕ ಕಾರ್ಯಕರ್ತರು ಉಪಸ್ಥಿತರಿದ್ದರು.

ಸಭೆಯಲ್ಲಿ ಜಾಥಾವನ್ನು ಯಶಸ್ವಿಗೊಳಿಸಲು ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ಕೈಗೊಳ್ಳುವ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರನ್ನು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮಾಡುವ ನಿರ್ಧಾರ ಕೈಗೊಳ್ಳಲಾಯಿತು.

# ಜಮೀರ್ ಅಹ್ಮದ್ ಖಾನ್‌ಗೆ ಸಚಿವ ಸ್ಥಾನ ನೀಡುವಂತೆ ಆಗ್ರಹ



■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.13**-ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರದ ಸಚಿವ ಸಂಪುಟದಲ್ಲಿ ಜಮೀರ್ ಅಹ್ಮದ್ ಖಾನ್ ಅವರಿಗೆ ಸ್ಥಾನ ನೀಡಬೇಕೆಂದು ಆಗ್ರಹಿಸಿ ಯಾದಗಿರಿ ನಗರದ ಗಾಂಧಿ ವೃತ್ತದಲ್ಲಿ ಮುಸ್ಲಿಂ ಸಮುದಾಯದ ಒಕ್ಕೂಟದ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.

ಪ್ರತಿಭಟನಾಕಾರರು ಜಮೀರ್ ಅಹ್ಮದ್ ಖಾನ್ ಅವರನ್ನು ಸಚಿವ ಸಂಪುಟದಲ್ಲಿ ಹಾಗೂ ಉಪ ಮುಖ್ಯಮಂತ್ರಿ ಹುದ್ದೆಗೆ ಪರಿಗಣಿಸಬೇಕು ಎಂದು ಒತ್ತಾಯಿಸಿದರು. ರಾಜ್ಯ ರಾಜಕಾರಣದಲ್ಲಿ ಹಾಗೂ ಕಾಂಗ್ರೆಸ್ ಪಕ್ಷದ ಬಲವರ್ಧನೆಯಲ್ಲಿ ಅವರ ಕೊಡುಗೆ ಮಹತ್ವದ್ದಾಗಿದ್ದು, ಅವರನ್ನು ಕಡೆಗಣಿಸಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಹೈಕಮಾಂಡ್ ಕೂಡಲೇ ಈ ವಿಷಯದ ಕುರಿತು ಗಮನಹರಿಸಿ, ಸಚಿವ ಸಂಪುಟದ ಎರಡನೇ ಪಟ್ಟಿಯಲ್ಲಿ ಜಮೀರ್ ಅಹ್ಮದ್ ಖಾನ್ ಅವರಿಗೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು. ಬೇಡಿಕೆ ಈಡೇರದಿದ್ದರೆ ಮುಂಬರುವ ಚುನಾವಣೆಯಲ್ಲಿ ಅದರ ಪರಿಣಾಮ ಎದುರಿಸಬೇಕಾಗಬಹುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ನದಿಮುಲ್ಲಾ ಹುಸೇನಿ ಇನಾಮದಾರ ಕಾಂಗ್ರೆಸ್ ಹಿರಿಯ ಮುಖಂಡರು,ಜಹಿರುದ್ದೀನ ಸವೇರ ವಕ್ಫಬೋರ್ಡ ಮಾಜಿ ಅಧ್ಯಕ್ಷರು ಯಾದಗಿರಿ,ಖಾಜಾ ಮೈನೋದ್ದಿನ್ ಗುರುಮಿಠಕಲ್ ಮಾಜಿ ನಗರ ಸಭೆ ಸದಸ್ಯರು,ಇನಾಯುತುಲ್ ಮಾಜಿ ಪುರಸಭೆ ಸದಸ್ಯ

ಯಾದಗಿರಿ,ಮಹ್ಮದ ಮೌಲಾಲಿ ಟಿಪುಸುಲ್ತಾನ ಸಂಯುಕ್ತ ರಂಗ ಜಿಲ್ಲಾಧ್ಯಕ್ಷರು,ಮುಸ್ತಾಕ ಅಹ್ಮದ ಬ್ಲಾಕ ಅಧ್ಯಕ್ಷರು ಬಿದಿ ಬದಿ ವ್ಯಾಪಾರಿಗಳು ಯಾದಗಿರಿ ನಗರ,ಮಹ್ಮದಸಾಬ ಕಾಂಗ್ರೆಸ್ ಹಿರಿಯ ಮುಖಂಡರು

ಕೆ.ಬಿಎನ್. ಕಾಟನ ಮಿಲ್ ನಾಯ್ಕಲ್,ಅಬ್ದುಲ್ ಕರಿಂ ಸಾಬ ನಾಲಾವರಿ ಮಾಜಿ ನಗರಸಭೆ ಸದಸ್ಯರು ಯಾದಗಿರಿ,ಮಹ್ಮದ ಮೋಸಿನಸಾಬ ಖಾದ್ರಿ ಧರ್ಮ ಗುರುಗಳು ಹುಲ್ಕಲ್ ಯಾದಗಿರಿ ಸೇರಿದಂತೆ ಸಮಾಜದ ಮುಖಂಡರು ಇದ್ದರು,

# ದಲಿತರಿಗೆ ಭೂಮಿ ವಸತಿ ನಿವೇಶನ ಭೂ ಒಡೆತನ ಯೋಜನೆ ನೀಡುವಂತೆ ಸಮತ ಸೈನಿಕ ದಳ ಒತ್ತಾಯ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.13**-ಸಮತ ಸೈನಿಕ ದಳ ಜಿಲ್ಲಾ ಸಮಿತಿ ವತಿಯಿಂದ ದಲಿತರಿಗೆ ಭೂಮಿ ವಸತಿ ನಿವೇಶನ ಭೂ ಒಡೆತನ ಯೋಜನೆ ನೀಡುವಂತೆ ಒತ್ತಾಯಿಸಿ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾಧಿಕಾರಿಗಳ ಕಚೇರಿ ವರೆಗೆ ಬೃಹತ್ ಪ್ರತಿಭಟನೆ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಯಾದಗಿರಿ ಜಿಲ್ಲೆಯ ಹತ್ತಿಗುಡೂರ ಕೊಂಗೊಂಡಿ ಅನವಾರ ಬೊಮ್ಮನಹಳ್ಳಿ ಐಕೂರ ಯಕ್ಷಿಂತಿ ದೊರನಳ್ಳಿ ಹೋತಪೇಟ ಏವೂರ ಗೋಗಿ ಇಟಗಿ ಹಯ್ಯಾಳ ಬಿ ಸಿರವಾಳ ಹಸನಾಪೂರ ಕಾಡಂಗೇರಾ ತುಮಕೂರು ದೇವಾಪೂರ ಮಾಲಹಳ್ಳಿ ಟಿ ವಡಗೇರ ದಲಿತ ಕುಟುಂಬಗಳಿಗೆ ಭೂಮಿ ವಸತಿ ನಿವೇಶನ ಇಲ್ಲದೆ ಸುಮಾರು ದಶಕಗಳು ಕಳೆದರೂ ದಲಿತ ಕುಟುಂಬಗಳಿಗೆ ಉಳಿಮೆ ಮಾಡಲು ಭೂಮಿ ಇಲ್ಲ ವಾಸಿಸಲು ಮನೆಗಳಿಲ್ಲ ಕಳೆದ 2018/19 ಸಾಲಿನಲ್ಲಿ ಜಿಲ್ಲಾಧಿಕಾರಿಗಳು ತಮ್ಮ ಅಧ್ಯಕ್ಷತೆಯಲ್ಲಿ ಭೂ ಒಡೆತನ ಯೋಜನೆ ಸಭೆ ಮಾಡಿ ಅಂದು ಜಿಲ್ಲೆಯ ಫಲಾನುಭವಿಗಳಿಗೆ ಭೂಮಿ ಹಂಚಿಕೆ ಮಾಡಿದ್ದು ಇಲ್ಲಿಯವರೆಗೆ ಭೂ ಒಡೆತನ ಯೋಜನೆ ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ ಭೂ ಮಾಲೀಕರು ಭೂಮಿ ಒಪ್ಪಿಗೆ ನೀಡಿ ನಾಲ್ಕೈದು ವರ್ಷಗಳು ಕಳೆದರೂ ಜಿಲ್ಲಾಧಿಕಾರಿಗಳು ಅಧ್ಯಕ್ಷತೆ ಸಮಿತಿ ಕಮಿಟಿ ಮಾಡಿಲ್ಲ ಇದರಿಂದ ಒಂದು ಕಡೆ ಭೂಮಿ ನೀಡಿದ ಭೂ ಮಾಲಿಕರಿಗೆ ತೊಂದರೆ ಆಗುತ್ತಿದೆ ಮಾತೊಂದು ಕಡೆ ಭೂಮಿ ಇಲ್ಲದ ದಲಿತ ಕುಟುಂಬಗಳು ಭೂಮಿಯಿಂದ ವಂಚಿತರಾಗಿದ್ದಾರೆ.




ಈ ಎಲ್ಲಾ ಬೇಡಿಕೆಗಳನ್ನು ಈಡೇರಿಸುವಂತೆ ಸಾಕಷ್ಟು ಬಾರಿ ಜಿಲ್ಲಾಡಳಿತ ಹಾಗೂ ಶಾಸಕರಿಗೆ ಸಚಿವರಿಗೆ ಪ್ರತಿಭಟಿಸಿ ಮನವಿ ಸಲ್ಲಿಸಿದರು ಇಲ್ಲಿಯವರೆಗೆ ಸರ್ಕಾರ ಹಾಗೂ ಜಿಲ್ಲಾಡಳಿತ ಸ್ಪಂದಿಸಿಲ್ಲ ನಮ್ಮ ಸಮಸ್ಯೆಗಳು ಸ್ಪಂದಿಸದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಂಡು ತಕ್ಷಣ ನಮ್ಮ ಬೇಡಿಕೆಗಳು ದಲಿತ ಕುಟುಂಬಗಳಿಗೆ ಭೂಮಿ ವಸತಿ ನಿವೇಶನ ನೀಡಬೇಕು ಅಂಬೇಡ್ಕರ್ ಸಮುದಾಯ ಭವನ ಮಂಜೂರು ಮಾಡಬೇಕು ರೈತರ ಜಮೀನುಗಳಿಗೆ ರಸ್ತೆ ಸುಧಾರಣೆ ಮಾಡಬೇಕು ರೈತರಿಗೆ ಅವೈಜ್ಞಾನಿಕ ರೀತಿಯಲ್ಲಿ ರಸಗೊಬ್ಬರ ವಿತರಿಸುವುದು ಬಿಟ್ಟು ರೈತರಿಗೆ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರ ನೀಡುವಂತೆ ಕೃಷ್ಣ ನದಿ ಪ್ರವಾಹಕೊಳಗಾಗುತ್ತಿರುವ ದಲಿತ ಕುಟುಂಬಗಳಿಗೆ ನಿವೇಶನ ಮತ್ತು ವಸತಿ ಕಲ್ಪಿಸುವಂತೆ ಸಮತ ಸೈನಿಕ ದಳ ಹಾಗೂ ಜಿಲ್ಲಾ ಸಮಿತಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ( ಸಂಯೋಜಕ) ಜಿಲ್ಲಾ ಸಮಿತಿ ಜಿಲ್ಲಾ ಮಹಿಳಾ ಘಟಕ ಯಾದಗಿರಿ ವತಿಯಿಂದ ಜಿಲ್ಲಾಧಿಕಾರಗಳ ಮುಖಾಂತರ ರಾಜ್ಯದ ಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿ ದರು.

ಈ ಸಂದರ್ಭದಲ್ಲಿ ಸಮತ ಸೈನಿಕ ದಳ ಹಾಗೂ ಆರ್ ಪಿ ಐ ರಾಜ್ಯ ಅಧ್ಯಕ್ಷರು ಸತೀಶ್,ದಲಿತ ಮುಖಂಡರಾದ ಎ.ಬಿ ಹೊಸ್ಮನಿ,ಕರ್ನಾಟಕ ರಾಜ್ಯ ರೈತ ಸಂಘ ರಾಜ್ಯ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಸತ್ಯಂಪೇಟೆ,ಬಾಲಾಜಿ ಕಾಂಬ್ಳೆ,ಹತ್ತಿಗುಡೂರ ಶರಣರಡ್ಡಿ,ಶರಣಪ್ಪ ಚಲುವಾದಿ, ಸಿದ್ದಪ್ಪ ಹೊಸಮನಿ,ನಿಂಗಣ್ಣ ಕರಡಿ,ದೇವಪ್ಪ ಅನಸೂರ, ಸಿದ್ದಲಿಂಗಪ್ಪ ಕಡಿಮನಿ, ನಿಂಗಾರಡ್ಡಿ ರಸ್ತಾಪೂರ,ಶರಣಪ್ಪ ಸೋತೆನೊರ,ಮಾಳಮ್ಮ ತಳವಾರ,ಜೇಜಮ್ಮ ಚಲುವಾದಿ, ಯಲ್ಲಮ್ಮ ರಸ್ತಾಪೂರ,ಬಾಲಮ್ಮ ಬೊಮ್ಮನಹಳ್ಳಿ,ಲಕ್ಷ್ಮಿ ತಳವಾರ,ಭಿಮಪ್ಪ ಅಲಗಿ ಸೇರಿದಂತೆ ನೂರಾರು ಮಹಿಳೆಯರು ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಮನುಕುಲದ ಮನೋಧರ್ಮದ ದೇವಾಲಯವಾಗಿದೆ ಕಾರುಣ್ಯ ಕುಟುಂಬ: ಸಾಬಣ್ಣ ವಗ್ಗರ

■ ಕನ್ನಡ ಮಾತೃ ಭೂಮಿ ವಾರ್ತೆ

**ಸಿಂಧನೂರು,ಜೂ.13**-ಸಿಂಧನೂರು ತಾಲೂಕ ಪಂಚಾಯತ ಪಿ.ಎಂ. ಪೋಷಣ್ ಸಹಾಯಕ ನಿರ್ದೇಶಕರು ಹಾಗೂ ತಾಲೂಕಾ ಬಿಸಿಯೂಟದ ಅಧಿಕಾರಿಗಳಾದ ಸಾಬಣ್ಣ ವಗ್ಗರ ಅವರು ತಮ್ಮ 56ನೇ ವರ್ಷದ ಜನ್ಮ ಸಾರ್ಥಕ ದಿನವನ್ನು ಸಿಂಧನೂರು ನಗರದ ವಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಹಾರ ವಸ್ತುಗಳನ್ನು ವಿತರಿಸಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಜನ್ಮ ಸಾರ್ಥಕ ದಿನದ ಕಾರ್ಯಕ್ರಮವನ್ನು ನೆರವೇರಿಸಿದರು.



ಈ ಕಾರ್ಯಕ್ರಮದಲ್ಲಿ ಆಶ್ರಮದ ವತಿಯಿಂದ ತಾಲೂಕ ಬಿಸಿಯೂಟದ ಅಧಿಕಾರಿಗಳಾದ ಸಾಬಣ್ಣ ವಗ್ಗರ ಹಾಗೂ ಸಿಂಧನೂರು ವಲಯದ ಕ್ಲಸ್ಟರ್ ಅಧಿಕಾರಿಗಳಾದ ಚನ್ನವೀರನಗೌಡ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ನಂತರ ಅಧಿಕಾರಿಗಳಾದ ಸಾಬಣ್ಣ ವಗ್ಗರ ಮಾತನಾಡಿ ಹುಟ್ಟು ಸಾವಿನ ಮಧ್ಯೆ ಮಾನವೀಯತೆಯ ಪಾಠಶಾಲೆಯಾಗಿದೆ ನಮ್ಮ ಕಾರುಣ್ಯಾಶ್ರಮ. ಸಮಾಜದಲ್ಲಿನ ಅದೆಷ್ಟೋ ನೆಲೆ ಇಲ್ಲದ ಹಿರಿಯರನ್ನು ಹಾಗೂ ವಯಸ್ಕರ ಬುದ್ಧಿಮಾಂದ್ಯರನ್ನು ರಕ್ಷಣೆ ಮಾಡುತ್ತಾ ಪ್ರತಿಯೊಬ್ಬರ ಮನೆ ಮನಸ್ಸಿನಲ್ಲಿದೆ. ನಮ್ಮ ನಾಡಿನ ಹರ ಗುರು ಚರಮೂರ್ತಿಗಳ ಬಸವಾದಿ ಶರಣರ ಆಶಯದಂತೆ ಕಾರುಣ್ಯ ಆಶ್ರಮದ ಸೇವಾ ಕಾರ್ಯ ನೆರವೇರುತ್ತಿರುವುದು ನಮ್ಮ ಸಿಂಧನೂರಿನ ಘನತೆ ಗೌರವವನ್ನು ನಾಡಿಗೆ ತೋರಿಸಿಕೊಟ್ಟಂತಹ ಕೀರ್ತಿ ಕಾರುಣ್ಯ ಆಶ್ರಮಕ್ಕೆ ಸಲ್ಲುತ್ತದೆ. ಮನುಕುಲದ ಮನೋಧರ್ಮದ ದೇವಾಲಯವಾಗಿದೆ ಕಾರುಣ್ಯ ಕುಟುಂಬ. ಬಡಜಂಗಮರಾಗಿ ನಾಡಿಗೆ ಕರುಣೆಯ ಸಂಸ್ಕೃತಿಯನ್ನು ತೋರಿಸಿಕೊಟ್ಟಿರುವ ಹರೇಟನೂರಿನ ವೇದಮೂರ್ತಿ ಅಮರಯ್ಯ ಸ್ವಾಮಿಯವರು ಸಮಾಜದ ಬಹುದೊಡ್ಡ ಆಸ್ತಿಯಾಗಿದ್ದಾರೆ. ಈ ಸೇವೆಯಲ್ಲಿ ನಾವು ಆಡಳಿತಾತ್ಮಕವಾಗಿ ಮತ್ತು ವೈಯಕ್ತಿಕವಾಗಿ ನಿರಂತರ ಸಹಾಯ ಸಹಕಾರ ಮಾಡುತ್ತೇವೆ ಎಂದು ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಚನ್ನವೀರನಗೌಡ ಸಿ. ಆರ್. ಪಿ. ಸಿಂಧನೂರು ವಲಯ ಕ್ಲಸ್ಟರ್ ಅಧಿಕಾರಿಗಳು. ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ ಮತ್ತು ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಹಾಗೂ ಅನೇಕರು ಉಪಸ್ಥಿತರಿದ್ದರು.

## ಮೂಲಭೂತ ಸೌಕರ್ಯ ಕೊರತೆ, ಉದ್ಯೋಗ ಖಾತ್ರಿ, ವೇತನ ಅಕ್ರಮ ಆರೋಪ

# ಆನ್ವರಿ ಗ್ರಾ.ಪಂಗೆ ಗ್ರಾಮಸ್ಥರ ಮುತ್ತಿಗೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಹಟ್ಟಿ ಚಿನ್ನದ ಗಣಿ,ಜೂ.13**-ಆನ್ವರಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಹೊಳೆತ್ತುವ ಕಾಮಗಾರಿ ನಿರ್ವಹಿಸಿದ ಕಾರ್ಮಿಕರಿಗೆ 340 ರೂ ವೇತನ,ಕೆಲಸ ನಿರ್ವಹಿಸದೆ ಇರುವ ಕಾರ್ಮಿಕರಿಗೆ 299 ರೂ ವೇತನ ಪಾವತಿಸಿ ಮೋಸಮಾಡಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ಕ ಈಣ)ವೆಂಕೋಬ ನಡೆಯನ್ನು ಖಂಡಿಸಿ ಹತ್ತಾರು ಕೂಲಿ ಕಾರ್ಮಿಕರು ಆನ್ವರಿ ಗ್ರಾಮ ಪಂಚಾಯಿತಿಗೆ. ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಲಾಯಿತು.

ಲಿಂಗಸಗೂರ ತಾಲೂಕಿನ ಆನ್ವರಿ ಗ್ರಾಮ ಪಂಚಾಯಿತಿಗೆ ಒಳಪಡುವ ಹೊಸೂರು, ಚುಕ್ಕನಟ್ಟಿ,ಹಿರೇನಗನೂರ,ಆನ್ವರಿ ಸೇರಿದಂತೆ ಜನಸಂಖ್ಯೆ ಹಾಗೂ ಮತಗಳ ಅನುಗುಣವಾಗಿ ಅಧ್ಯಕ್ಷರನ್ನೊಳಗೊಂಡು 24 ಸದಸ್ಯರ ಒಂದು ಗ್ರಾಮ ಪಂಚಾಯಿತಿ ಆನ್ವರಿ.ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರ ಅಧಿಕಾರಾವಧಿ ಮುಗಿದ ನಂತರ ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿಯಾಗಿ ನೇಮಕಗೊಂಡ ಮಾರ್ಟಿನ್ ರವರು ಗ್ರಾಮ ಪಂಚಾಯತಿಯ ಎಲ್ಲಾ ಕೆಲಸಗಳು ಮತ್ತು ಸಮಸ್ಯೆಗಳು ನಿಭಾಯಿಸುವುದು ಇವರ ಜವಾಬ್ದಾರಿ.

ಕಳೆದ ನಾಲ್ಕು ತಿಂಗಳಿಂದ ಗ್ರಾ.ಪಂಗೆ ಆಗಮಿಸದ ಪಿಡಿಓ ವೆಂಕೋಬ ರವರು ವಾರಕ್ಕೆ



ಒಂದು ಬಾರಿ ಮಾತ್ರ ಕಛೇರಿಗೆ ಬಂದು ಹೋಗುತ್ತಾರೆ.ಪಿಡಿಓ ರವರಿಗೆ ಸಾರ್ವಜನಿಕರು, ವಿದ್ಯಾರ್ಥಿಗಳು,ಯುವಜನರು ಹಾಗು ಗ್ರಾಪಂ. ಸಿಬ್ಬಂದಿಯವರೇ ದೂರವಾಣಿ ಕರೆ ಮಾಡಿದರೆ ಕರೆಯನ್ನು ಸ್ವೀಕರಿಸುವುದಿಲ್ಲ,ಕಾರಣ ಹೇಳಿದರೆ ಉತ್ತರವಿಲ್ಲ.ತಾಲೂಕ ಅಧಿಕಾರಿಗಳಾದ ನೀವುಗಳು ಈ ಪ್ರಶ್ನೆಗೆ ಉತ್ತರ ಕೊಡುವಿರಾ.ಹೀಗಾದರೆ ಸರ್ವಜನಿಕರ ಗೋಳು ಕೇಳುವರು ಯಾರು?

ಕೇಂದ್ರ ಮತ್ತು ರಾಜ್ಯ ಸರಕಾರಗಳ ಯೋಜನೆಗಳು ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬಾಪೂಜಿ ಸೇವಾ ಕೇಂದ್ರವನ್ನು ಸರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಕೋನದಿಂದ ಆರಂಭ ಮಾಡಿದ್ದು.ಬಾಪೂಜಿ ಸೇವಾ ಕೇಂದ್ರದಲ್ಲಿ ಸರ್ಕಾರ ಪಹಣಿ,ಮುಟೇಷನ್,ಜಾತಿ,ಆದಾಯ,ಭೂ ಹಿಡುವಳಿ, ಗೇಣಿ,ವಾಸ್ತಸ್ಥಳ,ಇನ್ನೂ ಅನೇಕ ಸೌಲಭ್ಯಗಳು ಸಮರ್ಪಕವಾಗಿ ಸಿಗುತ್ತಿಲ್ಲವೆಂದು ಆರೋಪಿಸಿದರು. ಆನ್ವರಿ ಗ್ರಾಮ ಪಂಚಾಯಿತಿಯ ಡಾಟಾ ಎಂಟ್ರಿ ಆಪರೇಟರ್ ಬಸವರಾಜಸ್ವಾಮಿ ಹಿರೇಮಠ್ ಇವರು ಕಛೇರಿಗೆ ಬಾರದೆ ಮಸ್ಕಿ ಹಾಗೂ ಲಿಂಗಸಗೂರಿನಲ್ಲಿ ಕುಳಿತುಕೊಂಡು ಉದ್ಯೋಗ ಖಾತ್ರಿಯ ಎನ್ ಎಮ್ ಆರ್,ಹಾಕುವುದಕ್ಕೆ ಹಾಗೂ ಖಾತಾ ಉತ್ತಾರ ನೀಡಲು ಸಾರ್ವಜನಿಕರಿಂದ ತಲಾ ಒಬ್ಬರಿಗೆ 5000 ಸಾವಿರ ರೂ ಲಂಚ ಪಡೆಯುತ್ತಾನೆಂದು ಗ್ರಾಮಸ್ಥರು ತಿಳಿಸಿದ್ದಾರೆ.ಆನ್ವರಿ ಗ್ರಾಮ ಪಂಚಾಯತಿಯ ಪಿಡಿಓ ವೆಂಕೋಬ,ಡಾಟಾ ಎಂಟ್ರಿ ಅಪರೇಟರ್ ಬಸವರಾಜಸ್ವಾಮಿ ಹಿರೇಮಠ್ ಇವರ ಮೇಲೆ ಸಂಬಂಧಪಟ್ಟ ತಾಲೂಕ ಅಧಿಕಾರಿಗಳು ಕ್ರಮಕ್ಕೆ ಮುಂದಾಗುತ್ತಾರೆ ಇಲ್ಲವೂ ಕಾದು ನೋಡಬೇಕಾಗಿದೆ? ಆನ್ವರಿ ಗ್ರಾಮ ಪಂಚಾಯತಿಯಲ್ಲಿ ಉದ್ಯೋಗ ಖಾತ್ರಿ ಕಾಮಗಾರಿ ಮಾಡಿದ್ರೂ ಬೇಗನೇ ಕೂಲಿಕಾರರ ಹಣ ಪಾವತಿಸಬೇಕು ಗ್ರಾಮಸ್ಥರಾದ ಯಲ್ಲಮ್ಮ ಒತ್ತಾಯಿಸಿದರು. ಸರ್ಕಾರದ ಆದೇಶದ ಮೇರೆಗೆ ಆನ್ವರಿ ಗ್ರಾಪಂಗೆ ಆಡಳಿತಾಧಿಕಾರಿ ನೇಮಕರಾದ ಮಾರ್ಟಿನ್ ರವರು ಕೂಲಿ ಕಾರ್ಮಿಕರ ಸಮಸ್ಯೆ ಕುರಿತು ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರುತ್ತೇನೆ ತಿಳಿಸಿದರು.ಆನ್ವರಿ ಗ್ರಾಮ ಪಂಚಾಯತಿಯ ನಾಲ್ಕು ಗ್ರಾಮಗಳಲ್ಲಿ ಮೇ 2 ರಿಂದ ಪ್ರಾರಂಭವಾದ ಉದ್ಯೋಗಖಾತ್ರಿ ಕೆಲಸವು ಮೇ 30ಕ್ಕೆ ಮುಕ್ತಾಯವಾಗಿದ್ದು. ಸಮಾನ ಕೆಲಸಕ್ಕೆ ಸಮಾನ ವೇತನ ಪಾವತಿಸಬೇಕು ಎಂದು ಗ್ರಾಮದ ಯುವ ನಾಯಕ ಹನುಮಂತ ದೇಸಾಯಿ ಆಗ್ರಹಿಸಿದರು. ಈ ಎಲ್ಲಾ ಸಮಸ್ಯೆಗಳನ್ನು ಪರಿಶೀಲಿಸಿದ ತಾಲೂಕು ಪಂಚಾಯತಿ ಇ ಓ ಉಮೇಶ್ ರವರು ಆನ್ವರಿ ಗ್ರಾಮ ಪಂಚಾಯತಿ ಪಿಡಿಓ ಹಾಗೂ ಬಸವರಾಜ್ ಹಿರೇಮಠ್ ರವರ ಮೇಲೆ ಸೂಕ್ತ ಕ್ರಮವನ್ನು ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಅಮರೇಶ ಬುಳ್ಳಾಪುರ,ಶಿವರಾಜ್,ಅಯ್ಯಳಪ್ಪ,ರೆಡ್ಡಪ್ಪ,ಹುಚ್ಚಪ್ಪ, ಮುತ್ತಮ್ಮ,ಅಮರಮ್ಮ,ಚಂದ್ರಕಲಾ,ರಾಮಮ್ಮ,ಬಸಮ್ಮ,ರೇಣುಕಾ ಗಂಗಮ್ಮಸೇರಿದಂತೆ ಇತರಿದ್ದರು.

# ನಿರಂತರ ಎಐ ಹಾಜರಾತಿ ವ್ಯವಸ್ಥೆ ಕುರಿತು ಮುಖ್ಯ ಶಿಕ್ಷಕರಿಗೆ ತರಬೇತಿ



■ ಕನ್ನಡ ಮಾತೃ ಭೂಮಿ ವಾರ್ತೆ

**ಜಾಲಹಳ್ಳಿ, ಜೂ.12**-ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ಜಾರಿಗೆ ತರಲಾಗುತ್ತಿರುವ ನಿರಂತರ ಅಐ ಆಧಾರಿತ ವಿದ್ಯಾರ್ಥಿಗಳ ಹಾಜರಾತಿ ವ್ಯವಸ್ಥೆ ಕುರಿತು ಗಾಣಧಾಳ ಹಾಗೂ ಜಾಲಹಳ್ಳಿ ಪಶ್ಚಿಮ ಸಿಆರ್‌ಸಿ ವಲಯಗಳ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ಮುಖ್ಯ ಶಿಕ್ಷಕರಿಗೆ ತರಬೇತಿ ಕಾರ್ಯಕ್ರಮ ಆಯೋಜಿಸಲಾಯಿತು.

ಈ ತರಬೇತಿಯಲ್ಲಿ ಎರಡು ಸಿಆರ್‌ಸಿ ವಲಯಗಳ ವ್ಯಾಪ್ತಿಯ ಎಲ್‌ಪಿಎಸ್ , ಎಚ್‌ಪಿಎಸ್ ಹಾಗೂ ಜಿಎಚ್‌ಎಸ್ (ಎಐಖ) ಶಾಲೆಗಳ ಒಟ್ಟು 42 ಮುಖ್ಯ ಶಿಕ್ಷಕರು ಹಾಗೂ ಒಬ್ಬ ಸಹ ಶಿಕ್ಷಕಿ ಭಾಗವಹಿಸಿದ್ದರು.ಕಾರ್ಯಕ್ರಮದಲ್ಲಿ ಸಿಆರ್‌ಪಿ ಕೃಷ್ಣಮೂರ್ತಿ ನಾಯಕ ಹಾಗೂ ಸೋಮುಶೇಖರ್ ದೊರೆ ಅವರು ನಿರಂತರ ಮೊಬೈಲ್ ಆ್ಯಪ್ ಬಳಕೆ, ಅಐ ಆಧಾರಿತ ವಿದ್ಯಾರ್ಥಿಗಳ ಹಾಜರಾತಿ ದಾಖಲಾತಿ, ವಿದ್ಯಾರ್ಥಿಗಳ ಮುಖ ಗುರುತಿಸುವಿಕೆ ವ್ಯವಸ್ಥೆ, ಹಾಜರಾತಿ ಮಾಹಿತಿಯ ನಿರ್ವಹಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ವಿವರವಾದ ತರಬೇತಿ ನೀಡಿದರು.

### ಲೋಕಾಯುಕ್ತರಿಂದ 56ಜನರ ಅಹವಾಲು ಸ್ವೀಕಾರ

# ಜಮೀನು ಖಾಸಗಿ ವ್ಯಾಜ್ಯಗಳೇ ಹೆಚ್ಚು.. ಪಡಿತರ ಕಾರ್ಡಿನ ಮಾಹಿತಿಯೇ ನೀಡಲ್ವಂತೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಕೊರಟಗೆರೆ,ಜೂ.12-**ಗ್ರಾಮೀಣ ಭಾಗದಿಂದ ಸಮಸ್ಯೆಗಳನ್ನ ತರುವ ಜನಸಾಮಾನ್ಯರ ಸಮಸ್ಯೆಗಳಿಗೆ ಅಧಿಕಾರಿವರ್ಗ ಬಗೆಹರಿಸಿದ್ರೇ ಲೋಕಾಯುಕ್ತ ಇಲಾಖೆಗೆ ಅರ್ಜಿಗಳೇ ಬರೋದಿಲ್ಲ. ಜನಸಾಮಾನ್ಯರ ಅರ್ಜಿಗಳನ್ನು ವಿಲೇವಾರಿ ಮಾಡುವ ಜವಾಬ್ದಾರಿ ಅಧಿಕಾರಿಗಳ ಜವಾಬ್ದಾರಿ ಎಂದು ತುಮಕೂರು ಲೋಕಾಯುಕ್ತ ಎಸ್ಪಿ ವಿವೇಕಾನಂದ ಗಿ.ತುಳಸಿಗೇರಿ ಕಿವಿಮಾತು ಹೇಳಿದರು.

ಕೊರಟಗೆರೆ ಪಟ್ಟಣದ ತಾಪಂ ಸಭಾಂಗಣದಲ್ಲಿ ತುಮಕೂರು ಲೋಕಾಯುಕ್ತ ಇಲಾಖೆಯಿಂದ ಬುಧವಾರ ಏರ್ಪಡಿಸಲಾಗಿದ್ದ ಸಾರ್ವಜನಿಕರ ಕುಂದುಕೊರತೆ ಸಭೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಸರಕಾರಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕಲ್ಲುಕ್ವಾರೆ ಮತ್ತು ಕಲ್ಲುಬಂಡೆ ಬ್ಲಾಸ್ಟಿಂಗ್‌ನಿಂದ ಬುಕ್ಕಾಪಟ್ಟಣ ರೈತರಿಗೆ ಸಮಸ್ಯೆ, ರೈತರ ಜಮೀನು ದಾಖಲೆ ಇಲ್ಲದೇ ಅಕ್ರಮವಾಗಿ ಪರಬಾರೇ, ಸುವರ್ಣಮುಖಿ ನದಿಯ ಒತ್ತುವರಿ,

ರೇಷನ್ ಕಾರ್ಡಿಗಾಗಿ ಅಲೆದಾಟ, ಮನೆಗಳ ಇಸ್ವತ್ತು ಸಮಸ್ಯೆ, ಸಾಗುವಳಿ ಚೀಟಿಯಿಂದ ಪಹಣಿ, ರೈತರ ಜಮೀನು ಸರ್ವೆಗೆ ಮೀನಾಮೇಷ ಸೇರಿದಂತೆ ಹತ್ತಾರು ಸಮಸ್ಯೆಗಳು ಲೋಕಾಯುಕ್ತ ಅಧಿಕಾರಿಗಳ ಗಮನ ಸೆಳೆದವು.

ಸಭೆಯಲ್ಲಿ ಲೋಕಾಯುಕ್ತ ಪೊಲೀಸ್ ಉಪಾಧ್ಯಕ್ಷ ಡಾ.ಸಂತೋಷ್, ಪೊಲೀಸ್ ಉಪಾಧ್ಯಕ್ಷ ಮಂಜುನಾಥ, ನಿರೀಕ್ಷಕ ರಾಜು.ಟಿ, ತಹಶೀಲ್ದಾರ್ ಮಂಜುನಾಥ, ತಾಪಂ ಇಓ ಅಪೂರ್ವ, ಸಿಪಿಐ ಪುರುಷೋತ್ತಮ್, ಪುರಸಭೆ ಸಿಇಓ ಉಮೇಶ್, ಸಮಾಜ ಕಲ್ಯಾಣ ಯಮುನಾ, ಸಿಡಿಪಿಓ ಗಂಗಾಧರ್, ಕೆಆರ್‌ಐಡಿಎಲ್ ಎಇಇ ಸಿಂಧು, ಬಿಸಿಎಂ ಅನಂತರಾಜು ಸೇರಿದಂತೆ ಇತರರು ಇದ್ದರು.



### ನದಿ ಒತ್ತುವರಿ ತೆರವಿಗೆ ಮೀನಾಮೇಷ..

ಕೊರಟಗೆರೆ ಪಟ್ಟಣದಲ್ಲಿ ಹಾದುಹೋಗುವ ಸುವರ್ಣಮುಖಿ ನದಿಯು ಮುಕ್ಕಾಲು ಭಾಗದಷ್ಟು ಜಮೀನು ಖಾಸಗಿ ವ್ಯಕ್ತಿಗಳ ಒತ್ತುವರಿಗೆ ಬಲಿಯಾಗಿದೆ. ಇದರಲ್ಲಿ ಖಾಸಗಿ ಕಟ್ಟಡಗಳನ್ನ ನಿರ್ಮಿಸಿಕೊಂಡಿರುತ್ತಾರೆ ಹನುಮಂತಪುರ ಸರ್ವೆ ನಂ.17, 18 ಮತ್ತು 19 ಅಕ್ರಮವಾಗಿ 160ಕ್ಕೂ ಅಧಿಕ 2012 ಕೂಡ ಅನುಮತಿ ಪಡೆದು ಇಲ್ಲಿಯವರೆಗೂ ಕಾಮಗಾರಿ ಪೂರ್ಣಗೊಳ್ಳದೆ ಅನಧಿಕೃತವಾಗಿ ಇಸ್ವತ್ತು ಮಾಡಲಾಗಿದೆ ಮತ್ತು ಬೋಡಬಂಡೇನಹಳ್ಳಿ ಸರ್ವೆ ನಂ.44ರಲ್ಲಿ ಅಕ್ರಮವಾಗಿ ಹತ್ತಾರು ಎಕರೇ ಅಕ್ರಮ ವಾಗಿ ನಿಯಮ ಉಲ್ಲಂಘಿಸಿ ಭೂಮಿ ಮಂಜೂರು ಮಾಡಲಾಗಿದೆ. ಅಕ್ರಮದಲ್ಲಿ ಭಾಗಿಯಾದ ಅಧಿಕಾರಿಗಳ ಹಾಗೂ ಒತ್ತುವರಿ ಮಾಡಿಕೊಂಡಿರುವ ಖಾಸಗಿ ವ್ಯಕ್ತಿಗಳ ವಿರುದ್ದ ಕಠಿಣ ಕ್ರಮ ಕೈಗೊಳ್ಳುವಂತೆ ಸಾಮಾಜಿಕ ಹೋರಾಟಗಾರ ಜೆಟ್ಟಿ ಅಗ್ರಹಾರ ನಾಗರಾಜು, ಲೋಕಾಯುಕ್ತ ಎಸ್ಪಿಗೆ ದೂರು ಸಲ್ಲಿಸಿದ್ದಾರೆ. ಭೂಕಬಳಿಕೆ ನ್ಯಾಯಮಂಡಳಿಗೆ ದೂರು ನೀಡಿ ಕ್ರಮ ಕೈಗೊಳ್ಳದೆ ಹೋದರೆ ತಾಲೂಕು ಕಚೇರಿ ಮುಂದೆ ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸುವುದಾಗಿ ತಿಳಿಸಿದ್ದಾರೆ,

### 56ಜನರಿಂದ ಅರ್ಜಿಗಳು ಸ್ವೀಕಾರ..

ಜಮೀನು ಸರ್ವೆ, ನದಿ-ರಸ್ತೆ ಒತ್ತುವರಿ, ಅಕ್ರಮ ಕಟ್ಟಡಗಳ ನಿರ್ಮಾಣ, ಪಡಿತರ ಚೀಟಿ ಸಮಸ್ಯೆ, ಗ್ರಾಪಂ ಇಸ್ವತ್ತು, ಕಲ್ಲುಕ್ವಾರೆ ಶಬ್ದ, ಮಾಹಿತಿನೇ ನೀಡೋದಿಲ್ಲ, ಪಹಣಿ ಸಮಸ್ಯೆ, ಸಾಗುವಳಿ ಚೀಟಿ ಸೇರಿದಂತೆ ಗಣಿ ಮತ್ತು ಭೂವಿಜ್ಞಾನ, ಆಹಾರ, ಸರ್ವೆ, ಕಂದಾಯ, ಗ್ರಾಪಂಗೆ ಸೇರಿದ 56ಜನರಿಂದ ಸಮಸ್ಯೆಗಳ ಅರ್ಜಿಗಳನ್ನು ಲೋಕಾಯುಕ್ತ ಅಧಿಕಾರಿಗಳು ಸ್ವೀಕರಿಸಿ ಕೆಲವನ್ನು ಸ್ಥಳದಲ್ಲೇ ಬಗೆಹರಿಸಿ ಇನ್ನೂಳಿದ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

### ಮಠದ ಆಸ್ತಿ ಅಕ್ರಮ ಪರಬಾರೆ..

ಮುಜರಾಯಿ ಇಲಾಖೆಯ ಮಠದ ಧಾರ್ಮಿಕ ಕಾರ್ಯಗಳಿಗೆ ನೀಡಿದ ಕೋಡ್ಲಹಳ್ಳಿಯ ಬಳ್ಳಾರಿ ಉಜ್ಜಯಿನಿ ಪೀಠದ ಖಾಸಾ ಶಾಖಾ ಸತ್ಯಧರ್ಮದ ಮಠದ ಸುಮಾರು 18ಎಕರೇ ಇನಾಂ ಭೂಮಿ ಖಾಸಗಿ ವ್ಯಕ್ತಿಗಳ ಹೆಸರಿಗೆ ಅಕ್ರಮವಾಗಿ ವರ್ಗಾವಣೆ ಮತ್ತು ಕೋಡ್ಲಹಳ್ಳಿಯಲ್ಲಿ ಇಲ್ಲದೇ ಇರುವ ದೇವರ ಹೆಸರಿನಲ್ಲಿ 15ಕೋಟಿಗೂ ಅಧಿಕ ತಸ್ತಿಕ್ ಹಣವನ್ನು ಬೆಂಗಳೂರಿನ ಉತ್ತಾರಾಧಿ ಮಠಕ್ಕೆ ಅನಧಿಕೃತವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಹೈಕೋರ್ಟ್ ವಕೀಲ ಪರಮೇಶಾರಾಧ್ಯ ಲೋಕಾಯುಕ್ತ ಎಸ್ಪಿಗೆ ದೂರು ಸಲ್ಲಿಸಿದರು.

# ಸೋಲಾಪುರ (ಕರ್ನಾಟಕ, ಉತ್ತರ ಭಾಗ) ದಿಂದ ವಾಸ್ಕೋ-ಡ-ಗಾಮಾಗೆ ರೈಲು ಸೇವೆಗಾಗಿ ರೈಲ್ವೆ ಸಚಿವ ವಿ.ಸೋಮಣ್ಣಗೆ ಮನವಿ



■ ಕನ್ನಡ ಮಾತೃ ಭೂಮಿ ವಾರ್ತೆ

**ಗೋವಾ,ಜೂ.12-**ವರದಿ ಬಾಳೇಶ್ ಉಪ್ಪಾರಹಟ್ಟಿ ಕನ್ನಡ ಸಂಘ ಜುವಾರಿನಗರ ಸಮಿತಿ ಮತ್ತು ಗೋವಾ ನಿವಾಸಿಗಳ ಪರವಾಗಿ (ಕರ್ನಾಟಕ, ಉತ್ತರ ಭಾಗ) ಮತ್ತು ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳಾದ ಸೋಲಾಪುರ ಮತ್ತು ಗೋವಾದ ವಾಸ್ಕೋ ನಡುವೆ ನೇರ ರೈಲು ಸೇವೆಯನ್ನು ಪರಿಚಯಿಸಲು ನಾವು ವಿನಮ್ರವಾಗಿ ವಿನಂತಿಸುತ್ತೇವೆ.

ಕೆಲಸ, ಶಿಕ್ಷಣ ಮತ್ತು ಇತರ ಉದ್ದೇಶಗಳಿಗಾಗಿ ಪ್ರತಿದಿನ ಪ್ರಯಾಣಿಸುವ ಹಲವಾರು ವ್ಯಕ್ತಿಗಳಿಗೆ ಈ ಮಾರ್ಗವು ಅತ್ಯಗತ್ಯ. ಅನೇಕ ಜನರು ಉತ್ತಮ ಉದ್ಯೋಗಾವಕಾಶಗಳನ್ನು ಹುಡುಕಲು ಗೋವಾಕ್ಕೆ ಪ್ರಯಾಣಿಸುತ್ತಾರೆ ಮತ್ತು ನೇರ ರೈಲು ಸಂಪರ್ಕದ ಅನುಪಸ್ಥಿತಿಯು ದೀರ್ಘ ಪ್ರಯಾಣದ ಸಮಯ, ಹೆಚ್ಚಿನ ವೆಚ್ಚ ಮತ್ತು ಅನಾನುಕೂಲತೆ ಸೇರಿದಂತೆ ಗಮನಾರ್ಹ ಸವಾಲುಗಳನ್ನು ಸೃಷ್ಟಿಸುತ್ತದೆ.

ಈ ಮಾರ್ಗದಲ್ಲಿ ಮೀಸಲಾದ ರೈಲು ಸೇವೆಯು ಕೈಗೆಟುಕುವ ಮತ್ತು ಪರಿಣಾಮಕಾರಿ ಸಾರಿಗೆ ವಿಧಾನವನ್ನು ಒದಗಿಸುತ್ತದೆ, ಇದು ಸ್ಥಳೀಯ ಜನಸಂಖ್ಯೆಗೆ ಮಾತ್ರವಲ್ಲದೆ ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸುವ ಮೂಲಕ ಕರ್ನಾಟಕ ಮತ್ತು ಗೋವಾ ಎರಡರಲ್ಲೂ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡುತ್ತದೆ.

ಈ ವಿನಂತಿಯನ್ನು ಪರಿಗಣಿಸಿ ಮತ್ತು ಈ ಮಾರ್ಗದಲ್ಲಿ ರೈಲು ಸೇವೆಯನ್ನು ಮೌಲ್ಯಮಾಪನ ಮಾಡಲು ಮತ್ತು ಕಾರ್ಯಗತಗೊಳಿಸಲು ಕ್ರಮಗಳನ್ನು ಪ್ರಾರಂಭಿಸಲು ನಾವು ನಿಮ್ಮನ್ನು ಕೋರುತ್ತೇವೆ.

ಇಂತಹ ಕ್ರಮವು ಸಾವಿರಾರು ದೈನಂದಿನ ಪ್ರಯಾಣಿಕರಿಗೆ ಅಪಾರ ಪರಿಹಾರವನ್ನು ತರುತ್ತದೆ ಮತ್ತು ಅವರ ಜೀವನದ ಗುಣಮಟ್ಟವನ್ನು ಸುಧಾರಿಸುತ್ತದೆ.

ಈ ತುರ್ತು ಅಗತ್ಯವನ್ನು ಪ ರಿಹರಿಸುವಲ್ಲಿ ಕೆನಡಾ ಸಂಘ ಸಮಿತಿ ಮತ್ತು ಬಾಧಿತ ನಿವಾಸಿಗಳು ನಿಮ್ಮ ಬೆಂಬಲ ಮತ್ತು ಸಕಾರಾತ್ಮಕ ಕ್ರಮಕ್ಕಾಗಿ ಆಗ್ರಹ ಈ ಸಂಧರ್ಭದಲ್ಲಿ ಅಧ್ಯಕ್ಷ ಶಿವಾನಂದ ಬಿಂಗಿ ಖಜಾಂಚಿ, ಮಾರುತಿ ಹಾದಿಮನಿ ರಂಗಪ್ಪ, ಚಂದ್ರಶೇಖರ, ಬಿಂಗಿ ವೀರೇಶ್ ಹಾದಿಮನಿ ಬಾಳೇಶ್ ಉಪ್ಪಾರಹಟ್ಟಿ ಅನೇಕರು ಉಪಸ್ಥಿತರಿದ್ದರು

# ಸಿರವಾರ ನೀರಾವರಿ ಇಲಾಖೆಯ ಸರ್ಕಾರಿ ಆಸ್ತಿ ದುರ್ಬಳಕೆ: ಅಧಿಕಾರಿ ವಿರುದ್ಧ ಕ್ರಮಕ್ಕೆ ಕರವೇ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ



**ಸಿರವಾರ,ಜೂ.12-**ನೀರಾವರಿ ಇಲಾಖೆಯ ವಿಭಾಗ-4ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ಅಉಉ) ವಿಜಯಲಕ್ಷ್ಮಿ ಅವರು, ಇಲಾಖೆಯ ಸರ್ಕಾರಿ ಆಸ್ತಿಯನ್ನು ಅಕ್ರಮವಾಗಿ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುಮಾರ್ ಶೆಟ್ಟಿ ಬಣ) ಪದಾಧಿಕಾರಿಗಳು ಕಾರ್ಯನಿರ್ವಾಹಕ ಇಂಜಿನಿಯರ್‌ಗೆ (ಉಉ) ದೂರು ಸಲ್ಲಿಸಿ, ಕಠಿಣ ಕ್ರಮಕ್ಕೆ ಆಗ್ರಹಿಸಿದ್ದಾರೆ.

**ಆರೋಪಗಳೇನು? :** ಇಲಾಖೆಯ ಅಧಿಕಾರಿ ವಿಜಯಲಕ್ಷ್ಮಿ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು, ಸಿರವಾರ ವಿಭಾಗ-4ರ ವ್ಯಾಪ್ತಿಗೆ ಬರುವ ಸರ್ಕಾರಿ ಸೊತ್ತುಗಳನ್ನು ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡುತ್ತಿದ್ದಾರೆ ಎಂದು ಸಂಘಟನೆಯ ಪದಾಧಿಕಾರಿಗಳು ಗಂಭೀರ ಆರೋಪ ಮಾಡಿದ್ದಾರೆ.

**ಪ್ರಮುಖ ಆರೋಪಗಳು:** 92ರ ಗೈಜ್ ರೂಮ್ ಸಂಖ್ಯೆ 104ರಲ್ಲಿ ಇದ್ದ ಟಿನ್ ಶೀಟ್‌ಗಳು.ಕಬ್ಬಿಣದ ರಾಡ್‌ಗಳು ಮತ್ತು ವಿದ್ಯುತ್ ಕಂಬಗಳು. ಕಾಲುವೆ ದುರಸ್ತಿ ಕಾಮಗಾರಿಯಿಂದ ತೆಗೆದ ಕಲ್ಲು ಬಂಡೆಗಳು. ಈ ಮೇಲ್ಕಂಡ ಸಾಮಗ್ರಿಗಳನ್ನು ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿ, ಅಧಿಕಾರಿಯೊಬ್ಬರು ಅಕ್ರಮವಾಗಿ ಮಾರಾಟ ಮಾಡಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

**ತನಿಖೆಗೆ ಆಗ್ರಹ ಹಾಗೂ ಎಚ್ಚರಿಕೆ:** ಈ ಅಕ್ರಮದ ಕುರಿತು ಕೂಡಲೇ ಉನ್ನತ ಮಟ್ಟದ ತನಿಖೆ ನಡೆಸಬೇಕು ಮತ್ತು ಸಂಬಂಧಪಟ್ಟ ಅಧಿಕಾರಿಯನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಬೇಕು ಎಂದು ಕರವೇ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ. ಇಲಾಖೆಯು ಈ ದೂರಿನ ಬಗ್ಗೆ ನಿರ್ಲಕ್ಷ್ಯ ವಹಿಸಿದರೆ, ಮುಂದಿನ 3-4 ದಿನಗಳ ಒಳಗಾಗಿ ಕಚೇರಿಯ ಮುಂದೆ ಉಗ್ರ ಸ್ವರೂಪದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ಕೆ. ರಾಘವೇಂದ್ರ ಖಾಜನಗೌಡ, ತಾಲೂಕು ಕಾರ್ಯಾಧ್ಯಕ್ಷ ವೆಂಕಟೇಶ್ ಶಂಕ್ರಿ, ಪದಾಧಿಕಾರಿಗಳಾದ ನಾಗೇಶ್ ನಾಯಕ, ಲಿಂಗಯ್ಯ ನಾಯಕ, ಅಲಂಬಾಷ, ಅಂಜಿನಯ್ಯ ಪೂಜಾರಿ, ಗುರುದೇವ ಜಕ್ಕಲದಿನ್ನಿ, ದೇವರಾಜ್ ದೇವತಗಲ್, ನಾಗಬಾಬು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜೂ.14ಕ್ಕೆ ಬಂಜಾರಾ ವರದಕ್ಷಿಣೆ ಪಿಡುಗು ನಿರ್ಮೂಲನೆ ಜಾಗೃತಿ ಸಭೆ : ಜಾಗೃತಿ ಸಭೆಗೆ ಪ್ರಕಾಶ ಚವ್ಹಾಣ ನೇತೃತ್ವ

■ ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯಪುರ,ಜೂ.12-**ನಗರದ ಸೋಲಾಪುರ ರೋಡ್ ,ಬಂಜಾರಾ ಕ್ರಾಸ್ ಹತ್ತಿರ ಬಂಜಾರಾ ಭವನದಲ್ಲಿ ಇದೇ ಜೂನ್ 14 ಕ್ಕೆ, ರವಿವಾರ ಬೆಳಿಗ್ಗೆ 10ಘಂಟೆಗೆ ಬಂಜಾರಾ ವರದಕ್ಷಿಣೆ ಪಿಡುಗು ನಿರ್ಮೂಲನೆ ಜಾಗೃತಿ ಸಭೆ ಆಯೋಜನೆ ಮಾಡಲಾಗಿದೆ ಎಂದು ರಾಷ್ಟ್ರೀಯ ಬಂಜಾರಾ ಪರಿಷತ್ ಹಾಗೂ ಸಂಸ್ಥಾಪಕ ಪ್ರಕಾಶ ಬಾಳು ಚವ್ಹಾಣ ಅವರು ತಿಳಿಸಿದರು.

ಪ್ರಕಾಶ ಬಾಳು ಚವ್ಹಾಣ ಮಾತನಾಡಿ ಸಾಮಾಜಿಕ ಬದಲಾವಣೆಗಾಗಿ ಬಂಜಾರ (ಲಂಬಾಣಿ) ಸಮಾಜವು ವರದಕ್ಷಿಣೆ ಮತ್ತು ದುಂದುವೆಚ್ಚಕ್ಕೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ನಿರ್ಣಯಗಳನ್ನು ಕೈಗೊಂಡಿದೆ. ಈ ನಿಟ್ಟಿನಲ್ಲಿ ರಾಜ್ಯದ ಹಲವು ಭಾಗಗಳಲ್ಲಿ ಮಹಾ ಪಂಚಾಯತ್‌ಗಳು ಸಭೆ ನಡೆಸಿ ಮಹತ್ವದ ಕ್ರಮಗಳನ್ನು ಜಾರಿಗೆ ತಂದಿವೆ.

ಬಂಜಾರಾ ಸಮಾಜದಲ್ಲಿ ಇತ್ತೀಚಿನ ದಿನಗಳಲ್ಲಿ ವರದಕ್ಷಿಣೆ ಎಂಬ ಸಾಮಾಜಿಕ ಪಿಡುಗು ಹೆಚ್ಚಾಗುತ್ತಿದ್ದು, ಇದರಿಂದ ಅನೇಕ ಬಡ ಕುಟುಂಬಗಳು ಆರ್ಥಿಕ ಹಾಗೂ ಮಾನಸಿಕ ತೊಂದರೆ ಅನುಭವಿಸುತ್ತಿವೆ. ಸಮಾಜದ ಗೌರವ, ಐಕ್ಯತೆ ಮತ್ತು ಮುಂದಿನ ಪೀಳಿಗೆಯ ಉತ್ತಮ ಭವಿಷ್ಯಕ್ಕಾಗಿ ಈ ಕೆಟ್ಟ ಪದ್ಧತಿಯ ನ್ನು ನಿರ್ಮೂಲನೆ ಮಾಡುವುದು ಅತ್ಯಾವಶ್ಯಕವಾಗಿದೆ ಎಂದರು.

ಈ ಹಿನ್ನೆಲೆಯಲ್ಲಿ ಸಮಾಜದ ಹಿತದೃಷ್ಟಿಯಿಂದ ವಿಶೇಷ ಜಾಗೃತಿ ಹಾಗೂ ಚಿಂತನಾ ಸಭೆಯನ್ನು ಆಯೋಜಿಸಲಾಗಿದೆ. ಸದರಿ ಸಭೆಯಲ್ಲಿ ಸಂತರು, ಮಹಾರಾಜರು, ಈ ಪೂಜಾರಿಯವರು ಹಾಗೂ ವಿದ್ಯಾವಂತ ಬುದ್ದಿ ಜೀವಿಗಳು ಭಾಗವಹಿಸಲಿದ್ದಾರೆ. ಹಾಗಾಗಿ ತಾವುಗಳು ಮಾನ್ಯ ಹಿರಿಯರಾಗಿ ಈ ಸಭೆಯಲ್ಲಿ ಭಾಗವಹಿಸಿ, ಅಮೂಲ್ಯ ಸಲಹೆ-ಸೂಚನೆಗಳನ್ನು ನೀಡಿ ಸಮಾಜಕ್ಕೆ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು.

ಈ ಸಭೆಯಲ್ಲಿ ಯಾವದೇ ರೀತಿಯ ರಾಜಕೀಯ ಸಲ್ಲದು ದಯವಿಟ್ಟು ಯಾರು ಅನ್ಯತಾ ಭಾವಿಸದೆ ಬಹು ಮುಖ್ಯವಾಗಿರುವ ಈ ಸಭೆಯಲ್ಲಿ ಪಾಲ್ಗೊಂಡು ಉತ್ತಮ ಸಮಾಜದ ನಿರ್ಮಾಣಕ್ಕಾಗಿ ಶ್ರಮಿಸುವಂತೆ ಕೋರುತ್ತೇವೆ ಎಂದರು.ಈ ಸಭೆಯಲ್ಲಿ ವರದಕ್ಷಿಣೆ ಪಿಡುಗು ನಿರ್ಮೂಲನೆ ಕುರಿತು ಚರ್ಚೆ, ಸರಳ ಹಾಗೂ ವರದಕ್ಷಿಣೆ ರಹಿತ ಮದುವೆ ಪ್ರೋತ್ಸಾಹ,ಸಮಾಜದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು, ವರದಕ್ಷಿಣೆ ಕುರಿತು ಯುವ ಪೀಳಿಗೆಗೆ ಮಾರ್ಗದರ್ಶನ ಕುರಿತು ಸಭೆ ನಡೆಸಲಾಗುವದು ಎಂದು ಎಂದು ಪ್ರಕಾಶ ಚವ್ಹಾಣ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಪಕ್ಷ ಸಂಘಟನೆ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಪ್ರಾಮಾಣಿಕ ಸೇವೆ ಪರಿಷತ್ ಸದಸ್ಯ ಸ್ಥಾನಕ್ಕೆ ಶರಣಪ್ಪ ಸಲಾದಪುರರಿಂದ ಕಾಂಗ್ರೆಸ್‌ಗೆ ಮನವಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.12-**ದೀರ್ಘಕಾಲದಿಂದ ಪಕ್ಷ ಸಂಘಟನೆ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಪ್ರಾಮಾಣಿಕ ಸೇವೆ ಸಲ್ಲಿಸುತ್ತಾ ಬಂದಿರುವ ತಮ್ಮನ್ನು ಮುಂಬರುವ ವಿಧಾನ ಪರಿಷತ್ ಸ್ಥಾನಕ್ಕೆ ನಾಮನಿರ್ದೇಶನ ಮಾಡುವ ಮೂಲಕ ನೀಡಿದ ಭರವಸೆಯನ್ನು ಈಡೇರಿಸಬೇಕು ಎಂದು ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ಅವರು ಕಾಂಗ್ರೆಸ್ ವರಿಷ್ಠರಲ್ಲಿ ಮನವಿಮಾಡಿದ್ದಾರೆ.


ಯಾದಗಿರಿ ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯ ಜೀವನದಲ್ಲಿ ಸುಮಾರು ನಾಲ್ಕು ದಶಕಗಳ ಕಾಲ ಯಾವುದೇ ವೈಯಕ್ತಿಕ ಸ್ವಾರ್ಥವಿಲ್ಲದೆ ಪಕ್ಷದ ತತ್ವ, ಸಿದ್ಧಾಂತ ಹಾಗೂ ನಾಯಕರ ಮಾರ್ಗದರ್ಶನದಂತೆ ಕಾರ್ಯನಿರ್ವಹಿಸಿದ್ದೇನೆ. ಇದೀಗ ನನ್ನ ಸೇವೆ ಹಾಗೂ ನಿಷ್ಠೆಯನ್ನು ಪರಿಗಣಿಸಿ ವಿಧಾನ ಪರಿಷತ್ ಸದಸ್ಯ ಸ್ಥಾನ ನೀಡುವ ಮೂಲಕ ನ್ಯಾಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಳೆದ ಹಲವು ವರ್ಷಗಳಿಂದ ವಿಧಾನ ಪರಿಷತ್ ಸ್ಥಾನಕ್ಕಾಗಿ ಮನವಿ ಮಾಡುತ್ತಾಬಂದಿದ್ದೇನೆ. ಪ್ರತಿಬಾರಿಯೂನಾಯಕರುಭರವಸೆ ನೀಡಿದರೂ ಅವಕಾಶ ದೊರೆ-ಯದೆ ಹೋಗುತ್ತಿದೆ. ಆದರೂ ಪಕ್ಷದ ಮೇಲಿನ ನಂಬಿಕೆ ಹಾಗೂ ನಾಯಕರ ಮೇಲಿನ ಗೌರವದಿಂದ ತಾಳ್ಮೆಯಿಂದ ಕಾಯುತ್ತಿದ್ದೇನೆ ಎಂದು ಅವರು ಹೇಳಿದರು.

2018ರಲ್ಲಿ ಮಾಜಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ತಮ್ಮನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಬಳಿ ಕರೆದುಕೊಂಡು ಹೋಗಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಸಿದ್ದರು.

ಆ ಸಂದರ್ಭದಲ್ಲಿ ಮುಂದಿನ ದಿನಗಳಲ್ಲಿ ವಿಧಾನ ಪರಿಷತ್ ಸ್ಥಾನ ನೀಡುವ ಬಗ್ಗೆ ಭರವಸೆ ನೀಡಲಾಗಿತ್ತು. ಈ ಮಾತಿಗೆ ದರ್ಶನಾಪುರ ಅವರೇ ಸಾಕ್ಷಿಯಾಗಿದ್ದಾರೆ ಎಂದು ಸಲಾದಪುರ ತಿಳಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ಸೇರಿದ ನಂತರ ಪಕ್ಷದ ಪ್ರತಿಯೊಂದು ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿದ್ದೇನೆ. ಚುನಾವಣೆ ಸಂದರ್ಭದಲ್ಲಿಯೂ ಯಾವುದೇ ನಿರೀಕ್ಷೆ ಇಟ್ಟುಕೊಳ್ಳದೆ ಪಕ್ಷದ ಗೆಲುವಿಗಾಗಿ ಶ್ರಮಿಸಿದ್ದೇನೆ.ಹಣ, ಅಧಿಕಾರದ ಹಿಂದೆ ಹೋಗದೆ ಸ್ವಚ್ಛ ರಾಜಕೀಯ ಜೀವನ ನಡೆಸಿಕೊಂಡುಬಂದಿದ್ದೇನೆ ಎಂದು ಹೇಳಿದರು.ತಮ್ಮನ್ನು ನಂಬಿರುವ ಅನೇಕ ಕಾರ್ಯಕರ್ತರು ಹಾಗೂ ಬೆಂಬಲಿಗರು




ನಿಮಗೆ ವಿಧಾನ ಪರಿಷತ್ ಸ್ಥಾನ ಸಿಗುತ್ತದೆಯೇ ಅಥವಾ ಭರವಸೆಗಳು ಮತ್ತೆ ಮುಂದೂಡಲ್ಪಡುತ್ತವೆಯೇಎಂದು ಪ್ರಶ್ನಿಸುತ್ತಿದ್ದಾರೆ.ಈಬೆಳವಣಿಗೆಗಳು ಮನಸ್ಸಿಗೆ ನೋವು ತಂದರೂ, ರಾಜಕೀಯದಲ್ಲಿ ತಾಳ್ಮೆ ಮತ್ತು ನಂಬಿಕೆ ಮುಖ್ಯ ಎಂಬ ಕಾರಣದಿಂದ ಇಷ್ಟು ದಿನ ಮೌನವಾಗಿದ್ದೇನೆ ಎಂದು ಭಾವುಕರಾಗಿ ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ಕುರುಬ ಸಮಾಜದ ಹಿರಿಯ ನಾಯಕರಾಗಿ ಗುರುತಿಸಿಕೊಂಡಿದ್ದರೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದಿಗೂ ವೈಯಕ್ತಿಕವಾಗಿ ಭೇಟಿ ಮಾಡಿಲ್ಲ.

ಏಕೆಂದರೆ ತಮ್ಮ ರಾಜಕೀಯ ನಾಯಕತ್ವವನ್ನು ಮಲ್ಲಿಕಾರ್ಜುನಖರ್ಗೆ ಅವರೊಂದಿಗೆ ಗುರುತಿಸಿಕೊಂಡು ಬಂದಿದ್ದೇನೆ. ನಾಯಕರು ನೀಡಿದ ಮಾತಿಗೆ ಬದ್ಧವಾಗಿ ನಡೆದುಕೊಳ್ಳುವುದು ತಮ್ಮರಾಜಕೀಯ ಸಂಸ್ಕಾರವಾಗಿದೆ ಎಂದು ಹೇಳಿದರು.

ತಮಗೆ ಯಾವುದೇ ನಿಗಮ ಮಂಡಳಿ ಸ್ಥಾನ ಅಥವಾ ಬೇರೆ ಹುದ್ದೆಯ ಆಸೆ ಇರಲಿಲ್ಲ. ವಿಧಾನ ಪರಿಷತ್ ಸ್ಥಾನಕ್ಕೆ ಮಾತ್ರ ನಿರಂತರವಾಗಿ ಮನವಿ ಮಾಡುತ್ತಾಬಂದಿದ್ದೇನೆ. ಈ ಬಾರಿ ಖಾಲಿಯಾಗಲಿರುವ ಸ್ಥಾನಕ್ಕೆ ತಮ್ಮನ್ನು ಪರಿಗಣಿಸಿ, ಕಲ್ಯಾಣ ಕರ್ನಾಟಕ ಭಾಗದ ಕುರುಬ ಸಮಾಜಕ್ಕೂ ಸೂಕ್ತ ಪ್ರಾತಿನಿಧ್ಯ ನೀಡಬೇಕು ಎಂದು ಆಗ್ರಹಿಸಿದರು. ಮಾಜಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಈ ವಿಚಾರದಲ್ಲಿ ಪಕ್ಷದ ವರಿಷ್ಠರ ಗಮನ ಸೆಳೆದು ನ್ಯಾಯ ದೊರಕಿಸಿಕೊಡಲುಮುಂದಾಗಬೇಕು ಎಂದು ಶರಣಪ್ಪ ಸಲಾದಪುರ ಮನವಿ ಮಾಡಿದರು.

# ಅಕ್ರಮ ಚಟುವಟಿಕೆ ತಡೆಯುವಲ್ಲಿ ವಿಫಲರಾದ ಅಧಿಕಾರಿಗಳ ವಿರುದ್ಧವೂ ಕ್ರಮಗೊಳ್ಳಲಿದೆ-ರಾಹುಲ್ ಪಾಂಡ್ವೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.12-**ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು, ಮುರಂಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆ ಮತ್ತು ಸಾಗಾಣಿಕೆ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ರಾಹುಲ್ ತುಕಾರಾಮ್ ಪಾಂಡ್ವೆ ಅವರು ಎಚ್ಚರಿಕೆ ನೀಡಿದ್ದಾರೆ.

ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಮರಳು, ಮುರಂ ಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆ ಮತ್ತು ಸಾಗಾಣಿಕೆಯನ್ನು ತಕ್ಷಣ ತಡೆಗಟ್ಟಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.



ಜಿಲ್ಲೆಯ ಸುರಪುರ, ಶಹಾಪುರ, ವಡಗೇರಾ ಸೇರಿದಂತೆ ವಿವಿಧ ತಾಲೂಕುಗಳ ವ್ಯಾಪ್ತಿಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದೆ ಎಂಬ ಹಲವು ದೂರುಗಳು ಬಂದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಎಚ್ಚೆತ್ತುಕೊಂಡಿದ್ದು, ಅಕ್ರಮ ಚಟುವಟಿಕೆಗಳಲ್ಲಿ ಬಳಸಲಾಗುತ್ತಿರುವ ಯಂತ್ರೋಪಕರಣಗಳು ಹಾಗೂ ವಾಹನಗಳನ್ನು ಜಪ್ತಿ ಮಾಡಿ ಸಂಬಂಧಪಟ್ಟವರ ವಿರುದ್ಧ ಪ್ರಕರಣ ದಾಖಲಿಸುವಂತೆ ನಿರ್ದೇಶನ ನೀಡಲಾಗಿದೆ.ಈ ಹಿನ್ನೆಲೆಯಲ್ಲಿ 2026ರ ಜೂನ್ 10ರಂದು ಶಹಾಪುರ ತಾಲೂಕಿನ ದೋರನಹಳ್ಳಿ ಗ್ರಾಮದ ವ್ಯಾಪ್ತಿಯಲ್ಲಿ ಅಕ್ರಮ ಮುರಂಗಣಿಗಾರಿಕೆಯಲ್ಲಿ ತೊಡಗಿದ್ದ ಹಿಟಾಚಿ ಯಂತ್ರವನ್ನು ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಕರ್ನಾಟಕ ಉಪಖನಿಜರಿಯಾಯಿತಿ ನಿಯಮಾವಳಿ 1994ರ ಪ್ರಕಾರ ನಿಯಮಾನುಸಾರ ರೂ.50 ಸಾವಿರ ದಂಡ ವಿಧಿಸಿ ಕ್ರಮ ಕೈಗೊಳ್ಳಲಾಗಿದೆ. ಅಕ್ರಮ ಗಣಿಗಾರಿಕೆಗೆ ಬಳಸಿದ

ಹಿಟಾಚಿ ಯಂತ್ರದ ವಿರುದ್ಧ ಶಹಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಅಕ್ರಮ ಮರಳು ಸಾಗಾಣಿಕೆಯಲ್ಲಿ ತೊಡಗಿದ್ದ ವಾಹನವನ್ನು ಪೊಲೀಸ್ ಇಲಾಖೆ ವಶಕ್ಕೆ ಪಡೆದು ಸೈದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಜಿಲ್ಲೆಯಲ್ಲಿ ಅಕ್ರಮಮರಳು,ಮುರಂ ಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆ ಮತ್ತು ಸಾಗಾಣಿಕೆ ತಡೆಯುವಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರು ನಿರ್ಲಕ್ಷ್ಯವಹಿಸಿದರೆ, ಅವರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಸೂಕ್ತ ಕಾನೂನುಕ್ರಮಕ್ಕೆಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಖಡಕ್ ಸೂಚನೆ ನೀಡಿದ್ದಾರೆ ಎಂದು ಜಿಲ್ಲಾ ಗಣಿತ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹತ್ತಿ ಬೆಳೆಯಲ್ಲಿ ಉತ್ತಮ ಇಳುವರಿ ಪಡೆಯಲು ರೈತರು ನೂತನ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವಂತೆ : ಶಾಸಕ ಅಶೋಕ ಮನಗೂಳಿ ಸಲಹೆ




■ ಕನ್ನಡ ಮಾತೃ ಭೂಮಿ ವಾರ್ತೆ

**ಸಿಂದಗಿ,ಜೂ.12-**ತಾಲೂಕಿನ ರಾಂಪುರ (ಪಿ.ಎ.) ಗ್ರಾಮದಲ್ಲಿರುವ ಆರೂಢ ಮಠದಲ್ಲಿ ಹತ್ತಿ ಬೆಳೆಯಲ್ಲಿ ನೂತನ ಉತ್ಪಾದನಾ ತಾಂತ್ರಿಕತೆಗಳ ಕುರಿತು ರೈತರಿಗೆ ಅರಿವು ಮೂಡಿಸುವ ಉದ್ದೇಶದಿಂದ ಆಯೋಜಿಸಿದ್ದ ಕಾರ್ಯಾಗಾರವನ್ನು ಶಾಸಕ ಅಶೋಕ ಎಂ. ಮನಗೂಳಿ ಉದ್ಘಾಟಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಅಶೋಕ ಮನಗೂಳಿ, ಕೃಷಿಯಲ್ಲಿ ಆಧುನಿಕ ತಂತ್ರಜ್ಞಾನ ಹಾಗೂ ವೈಜ್ಞಾನಿಕ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರಿಂದ ಉತ್ಪಾದನೆ ಹೆಚ್ಚಿಸುವುದರ ಜೊತೆಗೆ ಕೃಷಿ ವೆಚ್ಚವನ್ನು ಕಡಿಮೆ ಮಾಡಬಹುದು ಎಂದು ಹೇಳಿದರು. ಹತ್ತಿ ಬೆಳೆಯಲ್ಲಿ ಉತ್ತಮ ಇಳುವರಿ ಪಡೆಯಲು ರೈತರು ನೂತನ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದ ಇಂಡಿ ಕೃಷಿ ಉಪ ನಿರ್ದೇಶಕ ಚಂದ್ರಕಾಂತ ಪವಾರ, ಈ ಭಾಗದಲ್ಲಿ ಕಬ್ಬು ಮತ್ತು ಹತ್ತಿ ಪ್ರಮುಖ ವಾಣಿಜ್ಯ ಬೆಳೆಗಳಾಗಿರುವುದರಿಂದ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಶಾಸಕ ಅಶೋಕ ಮನಗೂಳಿ ಅವರ ಸಲಹೆಯಂತೆ ರಾಂಪುರದಲ್ಲಿ ಈ ಕಾರ್ಯಾಗಾರ ಆಯೋಜಿಸಲಾಗಿದೆ ಶಾಸಕರು ರೈತಪರ ಕಾಳಜಿ ಶ್ಲಾಘನೀಯ ಕೇಂದ್ರ ಸರ್ಕಾರದ ರಸ್ತಾರ್ ಯೋಜನೆಯಡಿ ಸುಮಾರು ₹1.18 ಕೋಟಿ ವೆಚ್ಚದಲ್ಲಿ ವಿವಿಧ ಗ್ರಾಮಗಳ ರೈತರಿಗೆ ಹಸುಗಳನ್ನು ವಿತರಿಸುವ ಮೂಲಕ ರೈತರ ಧ್ವನಿಯಾಗಿ ಕೆಲಸ ಮಾಡಿದರೆ ಎಂದು ಹೇಳಿದರು

ವಿಜಯಪುರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಎಸ್. ಎಸ್. ಪಾಟೀಲ್ ಮಾತನಾಡಿ, ಹತ್ತಿ ಈ ಭಾಗದ ರೈತರ ಬಿಳಿ ಬಂಗಾರವಾಗಿದ್ದು, ಉತ್ತಮ ಗುಣಮಟ್ಟದ ಬೆಳೆ ಬೆಳೆದು ಕಾರ್ಯಾಗಾರದ ಸದುಪಯೋಗವನ್ನು ರೈತರು ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಹತ್ತಿ ಬೆಳೆಯಲ್ಲಿ ಎಕರೆಗೆ 15 ಕ್ವಿಂಟಲ್‌ಗಿಂತ ಹೆಚ್ಚು ಇಳುವರಿ ಪಡೆದ ತಾಲೂಕಿನ ವಿವಿಧ ಗ್ರಾಮದ ರೈತರನ್ನು ಶಾಸಕ ಅಶೋಕ ಮನಗೂಳಿ ಸನ್ಮಾನಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೃಷಿಕ ಸಮಾಜದ ಅಧ್ಯಕ್ಷ ಶಿವಪ್ಪಗೌಡ ಬಿರಾದಾರ ಮಾತನಾಡಿ, ಕನಿಷ್ಠ 50 ರೈತರು ವಿಜ್ಞಾನಿಗಳ ಸಲಹೆಯಂತೆ ಬೆಳೆ ಪದ್ಧತಿ ಅನುಸರಿಸಿದರೆ ಈ ಕಾರ್ಯಾಗಾರ ನಡೆಸಿದ ಉದ್ದೇಶ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಕೃಷಿ ತಜ್ಞರು ಹತ್ತಿಯ ನೂತನ ತಳಿಗಳು, ಸಮಗ್ರ ಕೀಟ ನಿರ್ವಹಣೆ, ರೋಗ ನಿಯಂತ್ರಣ, ನೀರಿನ ಸಮರ್ಪಕ ಬಳಕೆ ಹಾಗೂ ಆಧುನಿಕ ಉತ್ಪಾದನಾ ತಾಂತ್ರಿಕತೆಗಳ ಕುರಿತು ರೈತರಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಶಂಕರಾನಂದ ಮಹಾರಾಜರು ದಿವ್ಯ ಸಾನಿಧ್ಯ ವಹಿಸಿದ್ದರು. ಆಲಮೇಲ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ನಿಂಗನಗೌಡ ಪಾಟೀಲ್, ದೇವರಹಿಪ್ಪರಗಿ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಸಿದ್ದು ಆನಂದಿ, ಅಶೋಕ ಅಲ್ಲಾಪುರ, ಮಾಜಿ ನಿಂಬೆ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಪ್ರಗತಿಪರ ರೈತ ಬಾಗಪ್ಪಗೌಡ ಪಾಟೀಲ್, ರೈತ ಮುಖಂಡ ಬಸವರಾಜ ರಂಜಣಗಿ, ಸಹಾಯಕ ಕೃಷಿ ನಿರ್ದೇಶಕ ಪ್ರಶಾಂತ ಸಾಣಿ, ಕೃಷಿ ಅಧಿಕಾರಿ ಶಿವಾನಂದ ಹೂನ್ನಳ್ಳಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ರೈತ ಮುಖಂಡರು ಹಾಗೂ ತಾಲೂಕಿನ ವಿವಿಧ ಗ್ರಾಮಗಳ ರೈತರು ಭಾಗವಹಿಸಿದ್ದರು.

## ...ಮೊದಲನೇ ಪುಟದಿಂದ

## ಇದು ನನ್ನ ಕೊನೆಯ ಪ್ರಮಾಣಪತ್ರ ಸ್ವೀಕಾರವಾಗಬಹುದು..!

ಎಲ್ಲೆಡೆ ಕೂರಿಸಿದ್ದಾರೆ. ಜಾರ್ಖಂಡ್‌ನಲ್ಲೂ ಇದೇ ರೀತಿ ಆಯ್ತು. ಮತ ಖರೀದಿ, ವಿಭಜನೆ ಮತ್ತು ವಿಜೇಂಟರನ್ನು ಇರಿಸಲಾಗುತ್ತದೆ. ಪ್ರಜಾಪ್ರಭುತ್ವದಲ್ಲಿ ಹಸ್ತಕ್ಷೇಪ ಇರಬಾರದು. ಆರ್‌ಎಸ್‌ಎಸ್ ಏಜೆಂಟ್‌ಗಳನ್ನು ಎಲ್ಲೆಡೆ ಇರಿಸಲಾಗಿದೆ. ನಿಯಮಗಳನ್ನು ಯಾರು ಪರಿಶೀಲಿಸುತ್ತಿಲ್ಲ ಎಂದು ಆರೋಪಿಸಿದರು.

13ನೇ ಸಲ ಜನಪ್ರತಿನಿಧಿಯಾಗುವ ಅವಕಾಶ ಸಿಕ್ಕಿದೆ. ಕಲಬುರ್ಗಿ ಜನತೆಗೆ ಧನ್ಯವಾದ ಹೇಳುತ್ತೇನೆ. ಪಕ್ಷದ ಎಲ್ಲಾ ಕಾರ್ಯಕರ್ತರಿಗೂ ಧನ್ಯವಾದ. ಖುಷಿ ಆಗುತ್ತಿದೆ. ಜೀವನದಲ್ಲಿ ಸತತವಾಗಿ ಈ ಅವಕಾಶ ಸಿಗುತ್ತಿರುವುದು ಕಾಂಗ್ರೆಸ್ ಕೊಡುಗೆಯಾಗಿದೆ. ಇಂದಿರಾಗಾಂಧಿಯಿಂದ ಸೋನಿಯಾ ಗಾಂಧಿವರೆಗೆ ನನಗೆ ಅವಕಾಶ ನೀಡಿದ್ದಾರೆ. ಸೋನಿಯಾ ಗಾಂಧಿಗೆ, ರಾಜ್ಯದ ಜನರಿಗೆ, ಯಾವ ಮತ ಕ್ಷೇತ್ರದಿಂದ ನನ್ನನ್ನು ಆರಿಸುತ್ತಾರೆ ಅವರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ರಾಹುಲ್ ಗಾಂಧಿ ನನ್ನ ಜೊತೆ ಇದ್ದು ಪ್ರೋತ್ಸಾಹ ನೀಡಿದ್ದಾರೆ. ರಾಹುಲ್ ಗಾಂಧಿ ನನ್ನ ಜೊತೆ ಸೌಹಾರ್ದತೆಯಿಂದ ವರ್ತಿಸುತ್ತಾರೆ. ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಹಾಗೂ ರಾಜ್ಯದ ಜನರು ಕೆಲಸ ಮಾಡಲು ಅವಕಾಶ ನೀಡಿದ್ದಾರೆ. ಯಾವಾಗಲೂ ಯಾವುದೇ ಕೆಲಸದಲ್ಲಿ ಮಾಧ್ಯಮ ಬೆಂಬಲ ಇಲ್ಲದೇ ಯಾರೂ ಕೂಡ ಜನರಿಗೆ ಪರಿಚಿತರಾಗುವುದಿಲ್ಲ. ಲೋಪದೋಷವನ್ನು ಎತ್ತಿ ಹಿಡಿಯುವುದು ಮಾಧ್ಯಮದವರ ಕೆಲಸವಾಗಿದೆ ಎಂದು ಅಭಿನಂದಿಸಿದರು.

1972ರಲ್ಲಿ ನಾನು ವಿಧಾನಸೌಧಕ್ಕೆ ಕಾಲಿಟ್ಟಿದ್ದೇನೆ. ಅನೇಕ ಏರುಪೇರು ನೋಡಿದ್ದೇನೆ. ಈಗ ಸ್ವಲ್ಪ ಬದಲಾವಣೆ ಆಗಿದೆ. ಮಾಧ್ಯಮಗಳು ಕಾರ್ಪೊರೇಟ್ ಸಂಸ್ಥೆಗಳ ನಿಯಂತ್ರಣದಲ್ಲಿದೆ. ಮುಂಚೆ ಪತ್ರಕರ್ತರು ಯಾವಾಗಲೂ ನಿಷ್ಪಕ್ಷಪಾತವಾಗಿ ಕೆಲಸ ಮಾಡುತ್ತಿದ್ದರು. ಪ್ರಜಾಪ್ರಭುತ್ವ ನಿಷ್ಪಕ್ಷಪಾತವಾಗಿ ಬೆಳೆಯಬೇಕಾದರೆ, ಮಾಧ್ಯಮದವರು ನಿಷ್ಪಕ್ಷಪಾತವಾಗಿ ಕೆಲಸ ಮಾಡಬೇಕು. ರಾಜಕೀಯ ವರ್ತನೆಯೂ ಹಾಗೇ ಇರಬೇಕು. ಅರವತ್ತು ವರ್ಷದಲ್ಲಿ ಬಹಳ ಬದಲಾವಣೆ ಕಂಡಿದ್ದೇನೆ. ಸುಧಾರಣೆ ಆಗಬೇಕು ಎಂಬುದು ನನ್ನ ಅನಿಸಿಕೆ ಎಂದು ಸ್ವಲ್ಪ ಖಾರವಾಗಿಯೇ ಹೇಳಿದರು.

ಎಲ್ಲಾ ಕ್ಷೇತ್ರಗಳಲ್ಲಿ, ಎಲ್ಲಾ ವರ್ಗಗಳಲ್ಲಿ ಬದಲಾವಣೆ ಆಗಿದೆ. ರಾಜಕೀಯದವರು ಉತ್ತಮವಾಗಿ ಕೆಲಸ ಮಾಡಬೇಕು, ವಿಚಾರಧಾರೆಯಿಂದ ಕೆಲಸ ಮಾಡಬೇಕು. ಇಲ್ಲವಾದರೆ ಜನರು ಅವರನ್ನು ಚುನಾವಣೆಯಲ್ಲಿ ಬದಲಾಯಿಸುತ್ತಾರೆ. ಕಾರ್ಪೊರೇಟ್ ಸಂಸ್ಥೆಗಳಿಗೆ ಯಾರೂ ಪಾಠ ಮಾಡುತ್ತಾರೆ?. ಅವರಿಗೆ ಹೇಳುವವರು ಯಾರು?. ಅವರನ್ನು ಯಾರು ಬದಲಾಯಿಸುತ್ತಾರೆ?. ಆದರ ಉದಾಹರಣೆಯನ್ನು ಜಾರ್ಖಂಡ್, ಮಧ್ಯಪ್ರದೇಶದಲ್ಲಿ ನೋಡಿದ್ದೇವೆ ಎಂದು ವಾಗ್ದಾಳಿ ನಡೆಸಿದ್ದಾರೆ.

## ಚುನಾವಣೆಯಲ್ಲಿ ಬಳಸಲಾಗಿದ್ದ 4,000 ಇವಿಎಂ ಭಸ್ಮ; ಅವಘಡದ ಸುತ್ತ ಅನುಮಾನದ ಹುತ್ತ!

ನಂತರ ಅದು ಇತರ ಮಹಡಿಗಳಿಗೂ ವ್ಯಾಪಿಸಿದೆ. ಹೀಗಾಗಿ ಕಟ್ಟಡದ 8 ಮತ್ತು 9ನೇ ಮಹಡಿಗಳಲ್ಲಿ ಇರಿಸಲಾಗಿದ್ದ ಸುಮಾರು 4,000 ಇವಿಎಂಗಳು ಸಂಪೂರ್ಣವಾಗಿ ಸುಟ್ಟು ಕರಕಲಾಗಿವೆ.

ಪಶ್ಚಿಮ ಬಂಗಾಳದ ಸರ್ಕಾರಿ ಕಟ್ಟಡವೊಂದರಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಸುಮಾರು 4,000 ಇವಿಎಂಗಳು ಸುಟ್ಟುಹೋಗಿವೆ ಎಂದು ಪಶ್ಚಿಮ ಬಂಗಾಳ ಸಚಿವ ಶೌಕಿಕ್ ಚೌಧರಿ ಅವರು ಗುರುವಾರ ಹೇಳಿದ್ದಾರೆ. ಸುಮಾರು 4,000 ಇವಿಎಂಗಳು ಬೆಂಕಿಯಲ್ಲಿ ಸುಟ್ಟು ಕರಕಲಾಗಿವೆ. ಈ ವರ್ಷದ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ 10 ಕ್ಷೇತ್ರಗಳಲ್ಲಿ ಆ ಇವಿಎಂಗಳನ್ನು ಬಳಸಲಾಗಿತ್ತು ಎಂದು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಚಿವರು ತಿಳಿಸಿದ್ದಾರೆ.

## ನಿರಂತರ ಎಐ ಹಾಜರಾತಿ ವ್ಯವಸ್ಥೆ ಕುರಿತು ಮುಖ್ಯ ಶಿಕ್ಷಕರಿಗೆ ತರಬೇತಿ

ಪ್ರತಿ ಶಾಲೆಯಲ್ಲೂ ವಿದ್ಯಾರ್ಥಿಗಳ ಹಾಜರಾತಿಯನ್ನು ತಂತ್ರಜ್ಞಾನ ಆಧಾರಿತವಾಗಿ ನಿಖರವಾಗಿ ದಾಖಲಿಸುವ ಉದ್ದೇಶದಿಂದ ಸರ್ಕಾರ ಈ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ತರಬೇತಿದಾರರು ಕರೆ ನೀಡಿದರು.

ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ನಿರಂತರ ಎಐ ವ್ಯವಸ್ಥೆಯ ಕಾರ್ಯವಿಧಾನದ ಕುರಿತು ಮಾಹಿತಿ ಪಡೆದು ತಮ್ಮ ಶಾಲೆಗಳಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಿದ್ಧತೆ ನಡೆಸಿದರು.

## ಬಾಲ ಕಾರ್ಮಿಕ ಪದ್ಧತಿ ನಿವಾರಣೆಗೆ ಜಾಗೃತಿ ಅತ್ಯವಶ್ಯಕ-ನ್ಯಾ.ಸಿದ್ದರಾಮಪ್ಪ ಕಲ್ಯಾಣರಾವ್

ಪಾಲಿಕೆ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಘಟಕ, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಜಿಲ್ಲಾ ಬಾಲಕಾರ್ಮಿಕ ಯೊಜನೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕುರಿತು ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯ ನಿರ್ವಹಣೆ ಮಾಡಬೇಕು. ವಿವಿಧ ಕಾರಣಗಳಿಗೆ ಬಾಲ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಮಕ್ಕಳನ್ನು ಗುರುತಿಸಿ ಶಿಕ್ಷಣ ನೀಡಿದಾಗ ಮಾತ್ರ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯಾಗುತ್ತದೆ ಎಂದರು.

ಹದಿನಾಲ್ಕು ವರ್ಷದೊಳಗಿನ ಮಕ್ಕಳನ್ನು ಅವರ ಶಿಕ್ಷಣ ಹಕ್ಕಿನಿಂದ ವಂಚಿಸಿ, ದುಡಿಮೆಗೆ ಬಳಸುವುದು ಕಾನೂನು ಪ್ರಕಾರ ಅಪರಾಧ. ಇದಕ್ಕಾಗಿ, ಮಕ್ಕಳಿಂದ ದುಡಿಸಿಕೊಳ್ಳುವವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಕಾನೂನಿನಡಿ ಶಿಕ್ಷೆ ವಿಧಿಸಲು ಅವಕಾಶವಿದೆ. ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರುದ್ಧ ನಿಗಾ ಇಡಬೇಕು ಎಂದು ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಅವರು ಮಾತನಾಡಿ, ಬಾಲಕಾರ್ಮಿಕ ಪದ್ಧತಿಯನ್ನ ಬೇರು ಸಮೇತ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ಸರ್ಕಾರದ ಈ ಪ್ರಯತ್ನಕ್ಕೆ ಸಂಘಸಂಸ್ಥೆ, ಸಂಘಟನೆಗಳು ಹಾಗೂ ಸಮುದಾಯಗಳು ಸಹ ಕೈ ಜೋಡಿಸಿದರೆ ಈ ಪದ್ಧತಿಗೆ ಸಂಪೂರ್ಣ ಕಡಿವಾಣ ಬೀಳಲಿದೆ ಎಂದು ಹೇಳಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ ಅವರು ಮಾತನಾಡಿ, ಬಾಲ ಕಾರ್ಮಿಕರನ್ನು ಪತ್ತೆಗೆ ಸಾರ್ವಜನಿಕರು ಸಹ ನೆರವಾಗಬೇಕು. ತಮ್ಮ ಸುತ್ತಮುತ್ತಲಿನ ಅಂಗಡಿ, ಹೋಟೆಲ್, ಕಾರ್ಖಾನೆ, ತೋಟ ಸೇರಿದಂತೆ ಎಲ್ಲಿಯಾದರೂ ಬಾಲ ಕಾರ್ಮಿಕರು ಕಂಡುಬಂದಲ್ಲಿ ಕಾರ್ಮಿಕ ಇಲಾಖೆಯ 1098 ಸಹಾಯವಾಣಿಗೆ ಮಾಹಿತಿ ನೀಡಬೇಕು. ಆಗ ಅಧಿಕಾರಿಗಳು ಬಂದು ಮಕ್ಕಳನ್ನು ರಕ್ಷಿಸುತ್ತಾರೆ ಎಂದರು. 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧ ಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986 ಹಾಗೂ ತಿದ್ದುಪಡಿ ಕಾಯ್ದೆ-2016ರಡಿ ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು.ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ 1098/112 ಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡುವುದರ ಮೂಲಕ ಸಮಾಜದಲ್ಲಿರುವ ಬಾಲಕಾರ್ಮಿಕ ಪದ್ಧತಿ ಎಂಬ ಪಿಡುಗನ್ನು ಹೋಗಲಾಡಿಸಲು ಎಲ್ಲಾರು ಸಹಕಾರ ನೀಡಬೇಕೆಂದರು.

ಪ್ರಮಾಣ ವಚನ: ನಾನು ಸತ್ಯವಾಗಿ, ಪ್ರಾಮಾಣಿಕವಾಗಿ ಹಾಗೂ ಆತ್ಮಸಾಕ್ಷಿಯಾಗಿ ಪ್ರಮಾಣ ಮಾಡುವುದೇನೆಂದರೆ, ನಾನು ವಾಸಿಸುವ ಸುತ್ತ ಮುತ್ತಲಿನ ಪ್ರದೇಶ ಹಾಗೂ ನಾನು ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ಬಾಲಕಾರ್ಮಿಕರು ಕಂಡುಬಂದಲ್ಲಿ ನೇಮಿಸಿಕೊಂಡ ಮಾಲೀಕರು ಹಾಗೂ ಪೋಷಕರಿಗೆ ತಿಳುವಳಿಕೆ ಹೇಳಿ ಮಗುವನ್ನು ಶಾಲೆಗೆ ಸೇರಿಸುತ್ತೇನೆ. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ತೊಡಗಿಸಿಕೊಂಡು ತಯಾರಿಸಲ್ಪಟ್ಟ ಯಾವುದೇ ವಸ್ತುವನ್ನು ಉಪಯೋಗಿಸುವುದಿಲ್ಲ ಮತ್ತು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಸೇವೆಯನ್ನು ಪಡೆಯುವುದಿಲ್ಲವೆಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನವಾದ ಇಂದು ಪ್ರಮಾಣ ಮಾಡುತ್ತೇನೆ ಎಂದು ರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮದ ಅಂಗವಾಗಿ ಪ್ರಮಾಣ ವಚನ ಭೋದಿಸಿದರು.

ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ: ಬೆಳಿಗ್ಗೆ 09.20ರ ನಂತರ ನಗರದ ತಹಶಿಲ್ದಾರ್ ಕಾರ್ಯಾಲಯದಿಂದ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರೆಗೆ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮದ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.

ಜಾಥಾದಲ್ಲಿ ಪ್ರತಿಯೊಬ್ಬ ಮಗುವಿನ ಹಕ್ಕು ಶಿಕ್ಷಣ, ದುಡಿಮೆಯಲ್ಲ. ಕೈಯಲ್ಲಿ ಕೆಲಸದ ಆಯುಧ ಬೇಡ, ಜ್ಞಾನದ ಪುಸ್ತಕವಿರಲಿ. ಬಾಲಕಾರ್ಮಿಕ ಪದ್ಧತಿ ದೇಶಕ್ಕೆ ಕಳಂಕ.! ಬಾಲ್ಯದಲ್ಲಿ ದುಡಿಮೆ ಮಕ್ಕಳ ಹಕ್ಕುಗಳ ಕಸಿತ, ಶಿಕ್ಷಣವೇ ಅವರ ನಿಜವಾದ ಭವಿಷ್ಯ ಎಂಬ ಘೋಷಣೆಗಳ ಸಾರ್ವಜನಿಕರ ಗಮನ ಸೆಳೆಯಿತು.ಜಾಥಾದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸೇರಿದಂತೆ ಇತರರು ವಿದ್ಯಾರ್ಥಿಗಳಿಗೆ ಸಾಥ್ ನೀಡಿದರು. ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಸುದರ್ಶನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ, ಬಾಬು, ರಾಯಚೂರು ವೃತ್ತ ಕಾರ್ಮಿಕ ನಿರೀಕ್ಷಕಿ ಕುಮಾರಿ ಪ್ರಿಯಾಂಕ ಸೇರಿದಂತೆ ಕಾರ್ಮಿಕ ಇಲಾಖೆಯ ವಿವಿಧ ಅಧಿಕಾರಿಗಳು, ವಿವಿಧ ಶಾಲಾ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

## ನೇಮಕಾತಿ ಹಿಂಪಡೆಯಲು ಜೆ.ಬಿ.ರಾಜು ಆಗ್ರಹ

ಸಿಂಧನೂರಿನ ಆರ್ಕ್ಸವರ್ಡ ಶಿಕ್ಷಣ ಸಂಸ್ಥೆಯ ಸತ್ಯನಾರಾಯಣ ಶೆಟ್ಟಿ ಇವರನ್ನು ನೇಮಿಸಿದ್ದಾರೆ. ಇರ್ವರು ಮಕ್ಕಳ ಹಕ್ಕುಗಳ ರಕ್ಷಣಾ ಕೇತ್ರದಲ್ಲಿ ಯಾವುದೇ ಸೇವೆಯೂ ಮಾಡಿಲ್ಲ. ಮಕ್ಕಳ ರಕ್ಷಣಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು ಆಗಿಲ್ಲ. ನಿಯಮಗಳನ್ನು ಪಾಲಿಸದೇ ನಿಯಮ ಉಲ್ಲಂಘಿಸಲಾಗಿದೆ. ಕೂಡಲೇ ರದ್ದುಗೊಳಿಸಿ ಹೊಸದಾಗಿ ಅರ್ಹರನ್ನು ನೇಮಿಸಬೇಕೆಂದರು. ಈ ಸಂದರ್ಬದಲ್ಲಿ ಸ್ಲಂ ಜನಾಂದೋಲನ ಕರ್ನಾಟಕದ ನರಸಿಂಹಮೂರ್ತಿ, ವಿದ್ಯಾ ಪಾಟೀಲ್, ಕೆ.ಪಿ.ಅನಿಲ್‌ಕುಮಾರ, ಶರಣಬಸವ, ಜಯಮ್ಮ, ಜನಾರ್ಧನ ಹಳ್ಳಿಬೆಂಚಿ, ನಾಗರಾಜ ಸೇರಿ ಅನೇಕರಿದ್ದರು.

## ಶ್ರೀ ಭಾಗ್ಯವಂತಿ ಶಾಲೆಯ ವಿರುದ್ಧ ದಲಿತ ವಿದ್ಯಾರ್ಥಿ ಪರಿಷತ್ ಆಕ್ರೋಶ; ಕ್ರಮಕ್ಕೆ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ



**ಜಾಲಹಳ್ಳಿ, ಜೂ.12**-ಪಟ್ಟಣದ ಶ್ರೀ ಭಾಗ್ಯವಂತಿ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಿ, ಶಾಲೆಯ ಕಾರ್ಯದರ್ಶಿ ಶರಣು ಹುಣಸಗಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದಲಿತ ವಿದ್ಯಾರ್ಥಿ ಪರಿಷತ್ (ಡಿವಿಪಿ) ದೇವದುರ್ಗ ತಾಲೂಕು ಘಟಕ ಆಗ್ರಹಿಸಿದೆ.

ಜಾಲಹಳ್ಳಿ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಜಾಲಹಳ್ಳಿ ಪಟ್ಟಣದ ಶ್ರೀ ಭಾಗ್ಯವಂತಿ ಶಾಲೆಯ ಕಾರ್ಯದರ್ಶಿ ಶರಣು ಹುಣಸಗಿ ಅವರ ವಿರುದ್ಧ ಹಲವಾರು ಗಂಭೀರ ಆರೋಪಗಳು ಕೇಳಿಬಂದಿದ್ದು, ಶಾಲೆಯಿಂದ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) ಪಡೆಯಲು ತೆರಳಿದ್ದ ಪಾಲಕರಿಗೆ ಬೆದರಿಕೆ ಹಾಕಿ, ಅಪಶಬ್ದಗಳಿಂದ ನಿಂದಿಸಿರುವ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವುದು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ.

ರಾಜಸ್ಥಾನ ಮೂಲದ ವ್ಯಕ್ತಿಯೊಬ್ಬರು ತಮ್ಮ ಮಗನನ್ನು ಬೇರೆ ಶಾಲೆಗೆ ದಾಖಲಿಸಲು ಟಿ.ಸಿ. ಕೇಳಿದ ಸಂದರ್ಭದಲ್ಲಿ, ಕಾರ್ಯದರ್ಶಿ ಶರಣು ಹುಣಸಗಿ ಅವರು ಅಪಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದ್ದು, ಈ ಕುರಿತ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ವೈರಲ್ ಆಗಿರುವ ಆಡಿಯೋದಲ್ಲಿ ಅವಾಚ್ಯ ಶಬ್ದಗಳ ಜೊತೆಗೆ ಬೆದರಿಕೆ ಹಾಕಿರುವ ಆರೋಪ ಕೇಳಿಬಂದಿದೆ.

ಈ ಹಿಂದೆಯೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬೆದರಿಕೆ ಹಾಕಿರುವುದು, ಹಲ್ಲೆ ನಡೆಸಿರುವುದು ಹಾಗೂ ಜಾತಿ ನಿಂದನೆ ಪ್ರಕರಣ ಸೇರಿದಂತೆ ವಿವಿಧ ಆರೋಪಗಳಲ್ಲಿ ಶರಣು ಹುಣಸಗಿ ಅವರ ಹೆಸರು ಕೇಳಿಬಂದಿದೆ ಎಂದು ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಅಧ್ಯಕ್ಷ ಬಸವರಾಜ (ಜಯಂ) ಹಾಗೂ ಗೌರವ ಅಧ್ಯಕ್ಷ ವೆಂಕಟೇಶ ಮುಪ್ಪಳ್ಳಿ ಆರೋಪಿಸಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಶರಣು ಹುಣಸಗಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಬೇಕು ಎಂದು ದಲಿತ ವಿದ್ಯಾರ್ಥಿ ಪರಿಷತ್ ಆಗ್ರಹಿಸಿದೆ.ಒಂದು ವೇಳೆ ಅಧಿಕಾರಿಗಳು ಈ ವಿಷಯದಲ್ಲಿ ನಿರ್ಲಕ್ಷ್ಯ ತೋರಿದರೆ, ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಜಿಲ್ಲಾ ಉಪನಿರ್ದೇಶಕರ (ಡಿಡಿಪಿಐ) ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘಟನೆಯ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಅಧ್ಯಕ್ಷ ಬಸವರಾಜ (ಜಯಂ), ಗೌರವ ಅಧ್ಯಕ್ಷ ವೆಂಕಟೇಶ ಮುಪ್ಪಳ್ಳಿ, ಉಪಾಧ್ಯಕ್ಷ ಈಶಪ್ಪ ಅರಗಲ್, ಪ್ರಧಾನ ಕಾರ್ಯದರ್ಶಿ ಚೆನ್ನಬಸವ ಮೇತ್ರಿ, ಕಾರ್ಯದರ್ಶಿ ಡೇವಿಡ್ ಮೇತ್ರಿ ಹಾಗೂ ಖಜಾಂಚಿ ಲಕ್ಷ್ಮಣ ಮಲ್ಕೋಜಿ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ಬಲಕಾರ್ಮಿಕ ಪದ್ಧತಿ ವಿರೋಧಿ ದಿನ ಮೌಲನ ಅಝುದ್ ಶಾಲೆ ಯಲ್ಲಿ ಆಚರಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಗಬ್ಬೂರು,ಜೂ.13**-ಸರಕಾರಿ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆ ಗಬ್ಬೂರು ತಾ ದೇವದುರ್ಗ ಜಿಲ್ಲಾ ರಾಯಚೂರು ಶಾಲೆಯಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಗಬ್ಬೂರು ಗ್ರಾಮದಲ್ಲಿ ವಿಜೃಂಭಣೆಯಿಂದ ಪ್ರಭಾತ್ ಪೇರಿಯ ಮುಖಾಂತರ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು, ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಸೂಗೂರೇಶ್ವರ ಹಿರೇಮಠ ಹಾಗೂ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉತ್ಸುಕತೆಯಿಂದ ಪಾಲ್ಗೊಂಡಿದ್ದರು.



ಮಾಹಿತಿ :ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನವನ್ನು ಆಚರಿಸಲಾಗುತ್ತದೆ. ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ತುರ್ತು ಅಗತ್ಯದ ಬಗ್ಗೆ ಜಾಗೃತಿ ಮೂಡಿಸಲು ಅಂತರರಾಷ್ಟ್ರೀಯ ಕಾರ್ಮಿಕ ಸಂಘಟನೆ (ಐಔಣ)ಯು 2002 ರಲ್ಲಿ ಈ ಜಾಗತಿಕ ಅಭಿಯಾನವನ್ನು ಪ್ರಾರಂಭಿಸಿತು. ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಮಹತ್ವಈ ದಿನವು ಬಾಲಕಾರ್ಮಿಕರ ದುಸ್ಥಿತಿ, ಅವರ ಹಕ್ಕುಗಳ ರಕ್ಷಣೆ ಮತ್ತು ಮಕ್ಕಳಿಗೆ ಶಿಕ್ಷಣವನ್ನು ಒದಗಿಸುವ ಬಗ್ಗೆ ಸರ್ಕಾರಗಳು, ಉದ್ಯೋಗದಾತರು ಮತ್ತು ಸಾರ್ವಜನಿಕರಿಗೆ ನೆನಪಿಸುತ್ತದೆ ವಿಶ್ವಸಂಸ್ಥೆ. ಪ್ರಪಂಚದಾದ್ಯಂತ ಲಕ್ಷಾಂತರ ಮಕ್ಕಳು ಇಂದಿಗೂ ಶೋಷಣೆಗೆ ಒಳಗಾಗುತ್ತಿದ್ದು, ಅವರ ಬಾಲ್ಯವನ್ನು ರಕ್ಷಿಸಿ ಉಜ್ವಲ ಭವಿಷ್ಯವನ್ನು ರೂಪಿಸುವುದು ಈ ಆಚರಣೆಯ ಮುಖ್ಯ ಉದ್ದೇಶವಾಗಿದೆ.

## ಯುವಜನರು ತಂತ್ರಜ್ಞಾನವನ್ನು ಬಳಸಿಕೊಂಡು ದೇಶದ ಅಭಿವೃದ್ಧಿಗೆ ಸಹಕರಿಸಲಿ-ಶರಣಯ್ಯ ಗುಡದೂರು

■ ಕನ್ನಡ ಮಾತೃ ಭೂಮಿ ವಾರ್ತೆ

**ಮಸ್ಕಿ,ಜೂ.13**-ಪ್ರಸ್ತುತ ಭಾರತ ದೇಶವು ತಂತ್ರಜ್ಞಾನದಲ್ಲಿ ಬಹಳ ಮುಂದುವರೆದಿದ್ದು, ಇಂದಿನ ಪೀಳಿಗೆಯ ಯುವಜನರು ತಂತ್ರಜ್ಞಾನವನ್ನು ಬಳಸಿಕೊಂಡು ದೇಶದ ಅಭಿವೃದ್ಧಿಗೆ ಸಹಕರಿಸಬೇಕು ಜೊತೆಗೆ ತಮ್ಮ ಜೀವನವನ್ನು ಕಟ್ಟಿಕೊಂಡು ಮುನ್ನಗಬೇಕಾದರೆ ಅದಕ್ಕೆ ತಂತ್ರಜ್ಞಾನದ ಅವಶ್ಯಕತೆಯಿದೆ ಆದ್ದರಿಂದ ಕಂಪ್ಯೂಟರ್ ತರಬೇತಿಯನ್ನು ಹೆಚ್ಚಿನ ಪ್ರಮಾಣದಲ್ಲಿ ಕಲಿಯಲು ಮುಂದಾಗಬೇಕು ಎಂದು ಶರಣಯ್ಯ ಗುಡದೂರು ಹೇಳಿದರು.

ಪಟ್ಟಣದ ಹೈಟೆಕ್ ಕಂಪ್ಯೂಟರ್ ಶಿಕ್ಷಣ ತರಬೇತಿ ಕೇಂದ್ರ, ಮಸ್ಕಿ,ಜನ ಶಿಕ್ಷಣ ಸಂಸ್ಥಾನ ರಾಯಚೂರು ಇವರ ನೇತೃತ್ವದಲ್ಲಿ ಅಸಿಸ್ಟೆಂಟ್ ಕಂಪ್ಯೂಟರ್ ಆಪರೇಟರ್ ತರಬೇತಿ ಉದ್ಘಾಟನೆಯನ್ನು ಮಾಡಿ ಉಪನ್ಯಾಸಕ ಶರಣಯ್ಯ ಗುಡದೂರು ಅವರು ಮಾತನಾಡಿದರು.ಸುಮಾರು ವರ್ಷಗಳಿಂದ ಹೈಟೆಕ್ ಕಂಪ್ಯೂಟರ್ ಶಿಕ್ಷಣ ಸಂಸ್ಥೆ ಇವರ ಉಚಿತ ಕಂಪ್ಯೂಟರ್ ಮತ್ತು ವಿವಿಧ ರೀತಿಯ ಕೌಶಲ್ಯ ತರಬೇತಿಗಳನ್ನು ನೀಡುತ್ತಾ ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ಕಲ್ಪಿಸಿಕೊಡಲಾಗುತ್ತಿದ್ದು ಇದೇ ರೀತಿಯಾಗಿ ಆ ಸಂಸ್ಥೆ ಮುಂದುವರೆಯಲಿ ಎಂದು ತಿಳಿಸಿದರು.ಹಾಗೂ ಇವತ್ತಿನ ದಿನಮಾನದಲ್ಲಿ ಆರ್ಟಿಫಿಷಿಯಲ್ ಇಂಟಲಿಜೆಂಟ್ ಅನ್ನುವ ಒಂದು ತಂತ್ರಜ್ಞಾನ ದೊಡ್ಡ ತಂತ್ರಜ್ಞಾನವಾಗಿದ್ದು ಇಂತಹ ಹಲವು ಯೋಜನೆಗಳನ್ನ ಬಳಕೆ ಮಾಡಿಕೊಂಡು ಅದನ್ನು ಸರಿಯಾಗಿ ಉಪಯೋಗಿಸಬೇಕೆಂದು ತಿಳಿಸಿದರು.ಇನ್ನೂ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸದಾನಂದ ಎಂ.ಪೂಜಾರಿ ನಿರ್ದೇಶಕರು ಜೆ ಎಸ್ ಎಸ್ ಮತ್ತು ಟಿ ಎಸ್ ಸಿ ರಾಯಚೂರ ರವರು ವಹಿಸಿ ಮಾತನಾಡಿ

ತರಬೇತಿಯ ಕುರಿತಾಗಿ ಶ್ರೀ ಸದಾನಂದ ಪೂಜಾರಿ ನಿರ್ದೇಶಕರು ಜೆಎಸ್‌ಎಸ್ ರಾಯಚೂರು ಇವರ ಮಾತ ನಾಡಿ ಎಲ್ಲ ವಿದ್ಯಾರ್ಥಿಗಳು ಶ್ರದ್ಧೆಯಿಂದ ಅಭ್ಯಾಸ ಮಾಡಿ ಚೆನ್ನಾಗಿ ಕಂಪ್ಯೂಟರ್ ತರಬೇತಿಯನ್ನು ತೆಗೆದುಕೊಂಡು ನಿಮ್ಮ ಮುಂದಿನ ಜೀವನಕ್ಕೆ ಆಧಾರವಾಗಿ ಆದಾಯವನ್ನು ತರಿಸುವಂತಹದಾಗಲಿ ಶ್ರಮಪಟ್ಟು ಆಸಕ್ತಿಯಿಂದ ಇಚ್ಛೆಯಿಂದ ಕಲಿತು ಸ್ವಯಂ ಉದ್ಯೋಗವನ್ನು ಸೃಷ್ಟಿ ಮಾಡಿಕೊಳ್ಳಿ ಮತ್ತು ಇನ್ನೊಬ್ಬರಿಗೆ ಕೆಲಸವನ್ನು ನೀಡುವ ಮಟ್ಟಿಗೆ ನೀವು ಬೆಳೆಯಬೇಕು

## ರೋಹಿಣಿ ಸಿಂಧೂರಿರೂಪಾ ಮೌದ್ಗಿಲ್ ಮಾನನಷ್ಟ ಪ್ರಕರಣದ ವಿಚಾರಣೆಗೆ ಸುಪ್ರೀಂ ಮಧ್ಯಂತರ ತಡೆ

ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದಿದ್ದ ಕರ್ನಾಟಕ ಹೈಕೋರ್ಟ್ ತೀರ್ಪನ್ನು ರದ್ದುಪಡಿಸುವಂತೆ ಕೋರಲಾಗಿತ್ತು. ಈ ಪ್ರಕರಣವು 2023ರಲ್ಲಿ ಇಬ್ಬರು ಹಿರಿಯ ಅಧಿಕಾರಿಗಳ ನಡುವೆ ಸಾರ್ವಜನಿಕವಾಗಿ ನಡೆದ ವಾಗ್ವಾದ ಮತ್ತು ಆರೋಪ-ಪ್ರತ್ಯಾರೋಪಗಳಿಂದ ಆರಂಭವಾಗಿತ್ತು.

## ಹೊಸದಾಗಿ ಶುಲ್ಕ ಹೆಚ್ಚಳ ಇಲ್ಲ, ಹಿಂದಿನದೇ ಅನ್ವಯ

ಮರುಪರೀಕ್ಷೆ ನಡೆಯಬೇಕಿರುವುದರಿಂದ ಒತ್ತಡಕ್ಕೆ ಒಳಗಾಗಿದ್ದಾರೆ. ಇಂತಹ ಸಮಯದಲ್ಲಿ ಶುಲ್ಕ ಹೆಚ್ಚಳ ಮಾಡುವುದು ಸರಿಯಲ್ಲ ಎಂಬ ತೀರ್ಮಾನ ಮಾಡಲಾಗಿದೆ ಎಂದರು.ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಮಂಡಳಿಯವರು ಶುಲ್ಕ ಹೆಚ್ಚಳ ಮಾಡುವ ಪ್ರಸ್ತಾವನೆಗೆ ನಾವು ಅವಕಾಶವನ್ನೇ ಕೊಟ್ಟಿಲ್ಲ. ಹೀಗಾಗಿ ವಿದ್ಯಾರ್ಥಿಗಳು ಮತ್ತು ಪೋಷಕರು ಯಾವುದೇ ರೀತಿಯ ಊಹಾಪೋಹಕ್ಕೆ ಕಿವಿಗೊಡಬಾರದು ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಮನವಿ ಮಾಡಿದರು.ಕಳೆದ ಸಾಲಿನಲ್ಲಿ ನಿಗದಿಪಡಿಸಿದ್ದ ಶುಲ್ಕವನ್ನೇ ಈ ಸಾಲಿನಲ್ಲೂ ಮುಂದುವರೆಸಲಾಗುವುದು. ಈ ನಿಯಮವು ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳೆರಡಕ್ಕೂ ಅನ್ವಯಿಸುತ್ತದೆ. ಈ ನಿರ್ಧಾರದಿಂದಾಗಿ ಪ್ರವೇಶ ಪಡೆಯಲಿರುವ ವಿದ್ಯಾರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿದಂತಾಗಿದೆ. ಡೆಂಟಲ್‌ಗೆ ಶುಲ್ಕ್ ಏರಿಕೆ ಮಾಡುವಂತೆ ಕೋರಿದ್ದರು. ಆದರೆ, ನಾವು ಅದನ್ನು ನಿರಾಕರಿಸಿದ್ದೇವೆ. ವೈದ್ಯಕೀಯ ಕಾಲೇಜುಗಳು ಒಪ್ಪಿಕೊಂಡಿದ್ದಾರೆ. ನೀಟ್ ಪೇಪರ್ ಲೀಕ್‌ನಿಂದ ಮಕ್ಕಳು ಆತಂಕದಲ್ಲಿದ್ದಾರೆ. ಹಾಗಾಗಿ ಅವರಿಗೆ ಹೊರೆ ಆಗುವುದು ಬೇಡ ಅಂತ ಈ ತೀರ್ಮಾನ ಮಾಡಲಾಗಿದೆ. ಕಳೆದ ವರ್ಷನೂ ಶುಲ್ಕ ಏರಿಕೆ ಮಾಡಲಾಗಿಲ್ಲ ಎಂದು ತಿಳಿಸಿದರು.

**ಬೇರೆ ರಾಜ್ಯಗಳ ವೈದ್ಯಕೀಯ ಶಿಕ್ಷಣ ಸಚಿವರ ಜೊತೆ ಸಭೆ:** ಡೀಮ್ಡ್ ವಿವಿ ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಯುಜಿಸಿ ಅಡಿ ಬರುತ್ತಾರೆ. ಎಂಸಿಸಿ ಮೂಲಕ ನೇರ ಕೌನ್ಸೆಲಿಂಗ್ ಮಾಡುತ್ತಾರೆ. ಈ ಸಂಬಂಧ ಕೇಂದ್ರ ಸರ್ಕಾರ ಯನಿಫಾರ್ಮ್ ಕಾನೂನು ತರಬೇಕು. ಶುಲ್ಕ ಹೇಗಿರಬೇಕು, ಸೀಟು ಮ್ಯಾಟ್ರಿಕ್ಸ್ ಹೇಗಿರಬೇಕು ಎಂಬ ಬಗ್ಗೆ ಸಮಾನ ಕಾನೂನು ತರಬೇಕು. ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಬೇಕು ಎಂದು ಶರಣಪ್ರಕಾಶ್ ಪಾಟೀಲ್ ಆಗ್ರಹಿಸಿದರು.ನೀಟ್ ಸೋರಿಕೆಯಾದ ಕಾರಣ 23 ಲಕ್ಷ ಮಕ್ಕಳು ಕಷ್ಟ ಅನುಭವಿಸುವಂತಾಗಿದೆ. ಕಳೆದ ನಾಲ್ಕೈದು ವರ್ಷದಿಂದ ಇದು ಪದೇ ಪದೆ ಆಗುತ್ತಿದೆ. ನಮ್ಮ ನಮ್ಮ ರಾಜ್ಯಗಳಿಗೆ ಪರೀಕ್ಷೆ ಮಾಡಲು ಅನುಮತಿ ನೀಡುವಂತೆ ಕೋರಿದ್ದೇವೆ. ಕೇಂದ್ರ ಸರ್ಕಾರನೂ ಈ ಬಗ್ಗೆ ವ್ಯವಸ್ಥೆ ಸರಿ ಮಾಡಬೇಕು.

## ಡೀಸೆಲ್ ಮಾರಾಟ-ದಿನಕ್ಕೆ ಪ್ರತಿ ವಾಹನಕ್ಕೆ 200 ಲೀಟರ್‌ಗೆ ಮಿತಿಗೊಳಿಸಿದ ಕೇಂದ್ರ

ಬೇಡಿಕೆ ಹೆಚ್ಚಾಗಿದೆ. ಈ ಬೆಳವಣಿಗೆಯನ್ನು ಅನುಸರಿಸಿ ವಿಶೇಷವಾಗಿ ಡೀಸೆಲ್‌ನ ಮೇಲೆ ನಿರ್ಬಂಧಗಳನ್ನು ವಿಧಿಸಲಾಗಿದೆ. ಅಂದರೆ ಇದು 90 ದಿನಗಳವರೆಗೆ ಈ ಆದೇಶ ಜಾರಿಯಲ್ಲಿರುತ್ತವೆ. ಮೇ ತಿಂಗಳಲ್ಲಿ ಮೂರು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ಐಒಸಿ, ಬಿಪಿಸಿಎಲ್ ಮತ್ತು ಎಚ್‌ಪಿಸಿಎಲ್ ಪೆಟ್ರೋಲ್ ಮಾರಾಟದಲ್ಲಿ ಶೇ. 4.8 ರಷ್ಟು ಏರಿಕೆ ಕಂಡು ಬಂದಿದೆ. ಇನ್ನು ಡೀಸೆಲ್‌ನಲ್ಲಿ ಶೇ. 6.4 ರಷ್ಟು ಏರಿಕೆಯಾಗಿತ್ತು. ಜೂನ್ 11 ರಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯವು ಮೋಟಾರ್ ಸ್ಪಿರಿಟ್ ಮತ್ತು ಹೈ ಸ್ಪೀಡ್ ಡೀಸೆಲ್ (ಚಿಲ್ಲರೆ ಮಾರಾಟ ಮಳಿಗೆಗಳ ಮೂಲಕ ಪೂರೈಕೆಯ ತಾತ್ಕಾಲಿಕ ನಿಯಂತ್ರಣ) ಆದೇಶ - 2026ರನ್ನು ಹೊರಡಿಸಿದೆ. ತೈಲ ಮಾರುಕಟ್ಟೆ ಕಂಪನಿಗಳು ಚಿಲ್ಲರೆ ಮಾರಾಟ ಮಳಿಗೆಗಳಿಂದ 90 ದಿನಗಳವರೆಗೆ ಬೃಹತ್ ಖರೀದಿಗಳನ್ನು ನಿರ್ಬಂಧಿಸುವಂತೆ ನಿರ್ದೇಶಿಸಿದೆ.ಅಂತಾರಾಷ್ಟ್ರೀಯ ಪೆಟ್ರೋಲಿಯಂ ಪೂರೈಕೆ ಸರಪಳಿ ಗಳು, ಸಾಗಣೆ ಲಾಜಿಸ್ಟಿಕ್ಸ್ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ಲಭ್ಯತೆಯ ಮೇಲೆ ಪ್ರತಿಕೂಲ ಪರಿಣಾಮ ಬೀರಿರುವ ಪ್ರಸ್ತುತ ಭೌಗೋಳಿಕ ರಾಜಕೀಯ ಪರಿಸ್ಥಿತಿಯಿಂದ ಈ ಕ್ರಮ ಅಗತ್ಯವಾಗಿದೆ ಎಂದು ಸರ್ಕಾರ ಸ್ಪಷ್ಟನೆಯನ್ನೂ ನೀಡಿದೆ. ಪ್ರಸ್ತುತ ಪರಿಸ್ಥಿತಿಯಲ್ಲಿ ದೇಶದ ಕೆಲವು ಭಾಗಗಳಲ್ಲಿ ಚಿಲ್ಲರೆ ಮಾರಾಟ ಮಳಿಗೆಗಳ ಮೂಲಕ ಮೋಟಾರ್ ಸ್ಪಿರಿಟ್ (ಪೆಟ್ರೋಲ್) ಮತ್ತು ಹೈ ಸ್ಪೀಡ್ ಡೀಸೆಲ್ (ಡೀಸೆಲ್) ಮಾರಾಟದಲ್ಲಿ ಅಸಹಜ ಹೆಚ್ಚಳ ಕಂಡು ಬಂದಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಆದೇಶದ ಪ್ರಕಾರ, ಸಾಂಸ್ಥಿಕ, ಕೈಗಾರಿಕಾ ಮತ್ತು ವಾಣಿಜ್ಯ ಗ್ರಾಹಕರು ಚಿಲ್ಲರೆ ಇಂಧನ ಕೇಂದ್ರಗಳಿಂದ ಪೆಟ್ರೋಲ್ ಮತ್ತು ಡೀಸೆಲ್ ಖರೀದಿಸುವುದನ್ನು ನಿರ್ಬಂಧಿಸಬಹುದು. ಬದಲಿಗೆ ತಮ್ಮದೇ ಆದ ಗ್ರಾಹಕ ಪಂಪ್‌ಗಳ ಮೂಲಕ ಸರಬರಾಜುಗಳನ್ನು ಪಡೆಯಬೇಕಾಗುತ್ತದೆ. ಅಧಿಸೂಚನೆಯ ಅನ್ವಯ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಡೀಸೆಲ್ ಮಾರಾಟವನ್ನು ವಾಹನ ಇಂಧನ ಟ್ಯಾಂಕ್‌ಗಳು ಅಥವಾ ಪೆಟ್ರೋಲಿಯಂ ಮತ್ತು ಸ್ಫೋಟಕ ಸುರಕ್ಷತಾ ಸಂಸ್ಥೆ (ಕಉಖಣ) ಅನುಮೋದಿತ ಕಂಟೇನರ್‌ಗಳಿಗೆ ಮಾತ್ರ ಸೀಮಿತಗೊಳಿಸುತ್ತದೆ. ಖರೀದಿಗಳನ್ನು ಪ್ರತಿ ಗ್ರಾಹಕ ಅಥವಾ ವಾಹನಕ್ಕೆ ದಿನಕ್ಕೆ 200 ಲೀಟರ್‌ಗಳಿಗೆ ಸೀಮಿತಗೊಳಿಸಲಾಗುತ್ತದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಈ ಆದೇಶವು ಸಾರ್ವಜನಿಕ ವಲಯದ ತೈಲ ಮಾರುಕಟ್ಟೆ ಕಂಪನಿಗಳು ಮತ್ತು ಇತರ ಅಧಿಕೃತ ಇಂಧನ ಚಿಲ್ಲರೆ ವ್ಯಾಪಾರಿಗಳಿಗೆ ನಿರ್ಬಂಧಗಳನ್ನು ಜಾರಿಗೊಳಿಸಲು ಅಧಿಕಾರ ನೀಡುತ್ತದೆ. ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಸಂಗ್ರಹಣೆ, ಬ್ಲ್ಯಾಕ್ ಮಾರ್ಕೆಟ್, ಅನಧಿಕೃತ ಖರೀದಿ ಮತ್ತು ಇಂಧನ ಸರಬರಾಜುಗಳನ್ನು ಬೇರೆಡೆಗೆ ತಿರುಗಿಸುವುದರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸುತ್ತದೆ. ಹೊಸ ಚೌಕಟ್ಟಿನ ಅಡಿ ವಿಧಿಸಲಾದ ಯಾವುದೇ ನಿರ್ಬಂಧಗಳು 90 ದಿನಗಳವರೆಗೆ ಜಾರಿಯಲ್ಲಿರಬಹುದು ಮತ್ತು ಹೊಸ ಸರ್ಕಾರಿ ಆದೇಶದ ಮೂಲಕ ಅದನ್ನು ವಿಸ್ತರಿಸಬಹುದು. ಪೆಟ್ರೋಲ್ ಮತ್ತು ಡೀಸೆಲ್‌ನ ಸಮಾನ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದು, ಸಂಗ್ರಹಣೆ ಮತ್ತು ಬೇರೆಡೆಗೆ ತಿರುಗಿಸುವುದನ್ನು ತಡೆಯುವುದು ಮತ್ತು ದೇಶಾದ್ಯಂತ ನಿರಂತರ ಪೂರೈಕೆಯನ್ನು ನಿರ್ವಹಿಸುವ ಗುರಿಯನ್ನು ಈ ಕ್ರಮಗಳು ಹೊಂದಿವೆ ಎಂದು ಸರ್ಕಾರ ಹೇಳಿದೆ.ದಾಸ್ತಾನು ಮಾಡುವುದು, ಅಕ್ರಮವಾಗಿ ಮಾರಾಟ ಮಾಡುವುದು, ಅನಧಿಕೃತ ಸಂಗ್ರಹಣೆಯಂತಹ ಇತರ ದುಷ್ಕೃತ್ಯಗಳ ವಿರುದ್ಧ ಕ್ರಮ ಸೇರಿದಂತೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಆಡಳಿತಗಳಿಗೆ ನಿರ್ದೇಶನ ನೀಡಿದೆ.

## ಜೂ.16 ರಂದು ರೈತರ ಪ್ರತಿಭಟನೆ- ಚಾಮರಸ ಮಾಲಿಪಾಟೀಲ್

ಕೊರತೆ ಅಭಾವ ಎದುರಾಗಿದೆ. ನೀರಾವರಿ ಪ್ರದೇಶದಲ್ಲಿ ನೀರು ಹರಿಕೆ ಪ್ರಾರಂಭವಾಗಿಲ್ಲ. ಮತ್ತಷ್ಟು ರಸಗೊಬ್ಬರ ಬೇಡಿಕೆ ಹೆಚ್ಚಳವಾಗಲಿದ್ದು ರೈತರಿಗೆ ತೀವ್ರ ಆತಂಕ ಎದುರಾಗಿದೆ. ಪಕ್ಕದ ಯಾದಗಿರಿ ಜಿಲ್ಲೆಯಲ್ಲಿ ಎಲ್ಲ ರೈತರಿಗೆ ರಸಗೊಬ್ಬರ ದೊರೆಯುವಂತೆ ಅಲ್ಲಿ ಜಿಲ್ಲಾಧಿಕಾರಿಗಳು ಎಕರೆವಾರು ರಸಗೊಬ್ಬರ ನಿಗಧಿ ಮಾಡಿದ್ದಾರೆ. ಅದೇ ಮಾದರಿಯಲ್ಲಿ ಜಿಲ್ಲೆಯಲ್ಲಿಯೂ ಎಲ್ಲ ರೈತರಿಗೆ ರಸಗೊಬ್ಬರ ದೊರೆಯುವಂತೆ ವ್ಯವಸ್ಥೆ ಮಾಡಬೇಕು. ರಸಗೊಬ್ಬದೊಂದಿಗೆ ಇತರೆ ಗೊಬ್ಬರ ಖರೀಧಿ ಮಾಡುವಂತೆ ಒತ್ತಾಯಿಸುತ್ತಿದ್ದು ತಡೆಯಬೇಕೆಂದರು. 29 ಸಾವಿರ ರೂ ರಸಗೊಬ್ಬರ ಖರೀಧಿ ಮಾಡಿದ ರೈತರಿಗೆ 9257 ರೂ ಇತರೆ ಗೊಬ್ಬರ ಖರೀದಿ ಮಾಡಬೇಕೆಂದು ಷರತ್ತು ವಿಧಿಸಲಾಗುತ್ತಿದೆ. ಕೂಡಲೇ ಅನಗತ್ಯ ಹೊರೆಯನ್ನು ತಡೆಯಲು ಜಿಲ್ಲಾಡಳಿತ ಮುಂದಾಗಬೇಕೆಂದರು. ಕೃಷಿಇಲಾಖೆ ಯಾವುದೇ ಕ್ರಮಕ್ಕೆ ಮುಂದಾಗುತ್ತಿಲ್ಲ. ಕೂಡಲೇ ಕ್ರಮ ಕೈಗೊಳ್ಳದಿದ್ದರೆ ರೈತ ಸಂಘವೇ ದೂರು ನೀಡಲಿದೆ ಎಂದು ಎಚ್ಚರಿಸಿದರು.

ನೀರಾವರಿ ಪ್ರದೇಶದ ಉಪ ಕಾಲುವೆಗಳು ಸ್ವಚ್ಚತೆ ಗೊಂಡಿಲ್ಲ. ಮುಖ್ಯ ಕಾಲುವೆ, ಉಪಕಾಲುವೆಗಳು ಹೂಳು ತೆಗೆಯದೇ ಇರುವದಿರಂದ ಸಮಸ್ಯೆ ಎದುರಾಗಲಿದೆ. ಸರ್ಕಾರ 20ಸಾವಿರ ಕೋಟಿ ನೀರಾವರಿ ಯೋಜನೆಗಳಿಗೆ ಕಾಯ್ದಿರಿಸುವದಾಗಿ ಹೇಳುತ್ತಿದೆ. ಕಾಲುವೆ ಸ್ವಚ್ಚತಾ ಕಾರ್ಯ ಕೈಗೊಳ್ಳಬೇಕೆಂದರು. ರೈತರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುತ್ತದೆ ಎಂದರು. ರೈತರ ಸಮಸ್ಯೆಗಳ ಕುರಿತು ನೂತನ ಮುಖ್ಯಮಂತ್ರಿಗಳಗಮನಕ್ಕೆ ತರಲಾಗಿದೆ. ಶೀಘ್ರದಲ್ಲಿ ರೈತ ಸಂಘದ ಪ್ರತಿನಿಧಿಗಳೊಂದಿಗೆ ಸಭೆ ನಡೆಸುವ ಭರವಸೆ ನೀಡಿದಾರೆ ಎಂದರು. ಈ ಸಂದರ್ಬದಲ್ಲಿ ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ್ ಇಂಗಳದಾಳ,ಬಸವರಾಜ ಮಾಲಿಪಾಟೀಲ್, ಸಿದ್ದಯ್ಯಸ್ವಾಮಿ, ಲಿಂಗನಗೌಡ ಪಾಟೀಲ್ ಇದ್ದರು.

## ತೊಂದರೆಯಾಗದಂತೆ ನೋಡಿಕೊಳ್ಳಿ-ಶಾಸಕ ಬಸನಗೌಡ ದದ್ದಲ್

ಬಗ್ಗೆಯೂ ಮಾಹಿತಿಯಿದ್ದು, ಈ ಚಟುವಟಿಕೆಗಳಿಗೆ ಕಾನೂನಿನಲ್ಲಿ ಸಾಕಷ್ಟು ಶಿಕ್ಷೆಗಳು ಮತ್ತು ಕೇಸ್ ದಾಖಲಿಸಲು ಅವಕಾಶವಿದೆ/ ಆದರೆ ಮಾರಾಟ ಮಾಡುವ ಅಂಗಡಿ ಮಾಲೀಕರಿಗೆ ಕೇಸ್‌ಗಳ ಕುರಿತು ಭಯ ಇಲ್ಲದಂತಾಗಿದೆ. ಕೂಡಲೇ ಕೇಸ್ ಗಳನ್ನು ದಾಖಲಿಸಬೇಕು ಮತ್ತು ಅವರ ಮೇಲೆ ಕೈಗೊಳ್ಳುವ ಕ್ರಮಗಳು ಕಠಿಣವಾಗಿರಬೇಕು ಎಂದು ಸೂಚಿಸಿದರು.ರಾಯಚೂರು ತಾಲೂಕಿನ ಬಹುತೇಕ ಗ್ರಾಮಗಳು ನೆರೆ ರಾಜ್ಯಗಳಿಗೆ ಸಂಪರ್ಕಿಸುವುದರಿಂದ ಇಲ್ಲಿನ ರಸಗೊಬ್ಬರ ಬೇರೆ ರಾಜ್ಯಗಳಿಗೆ ಹೋಗುತ್ತದೆ. ಇದರಿಂದ ರಾಜ್ಯದಲ್ಲಿ ರಸಗೊಬ್ಬರದ ಕೊರತೆ ಹೆಚ್ಚುತ್ತದೆ. ಆದ್ದರಿಂದ ಚೆಕ್ ಪೋಸ್ಟ್ ಗಳಲ್ಲಿ ಸರಿಯಾಗಿ ತಪಾಸಣೆ ನಡೆಸಬೇಕು ಎಂದು ತಿಳಿಸಿದರು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಸಂಬಂಧಿಸಿದಂತೆ ಮಟಮಾರಿ ಗ್ರಾಮ ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಕುರಿತು ಕಳೆದ ಕೆಡಿಪಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಈ ವರೆಗೂ ಸ್ಥಳೀಯರೊಂದಿಗೆ ಚರ್ಚಿಸಲಾಗುತ್ತಿದೆ ಎಂದು ಈ ಸಭೆಯಲ್ಲಿ ವರದಿ ನೀಡಿದ್ದೀರಿ. ಮೂರೂವರೆ ತಿಂಗಳಾದರೂ ಇನ್ನೂ ಚರ್ಚಿಸಲಾಗುತ್ತದೆ ಎಂದು ಕೊಡುವುದು ಸರಿಯಲ್ಲ. ಕೂಡಲೇ ಟ್ಯಾಂಕ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದರು. ಕಲಮಲಾ ಗ್ರಾಮದ ಕುಡಿಯುವ ನೀರಿನ ಕೆರೆ ಉದ್ಘಾಟನೆಯಾಗಿ ಹಲವು ದಿನಗಳಾದರೂ ಕೆರೆಯಿಂದ ಸುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಮಾಡಲಾಗುತ್ತಿಲ್ಲ. ಜೂ.25ರೊಳಗಾಗಿ ಎಲ್ಲಾ ಕಾರ್ಯಗಳನ್ನು ಮುಗಿಸಿ. ಉದ್ಘಾಟನೆಗೆ ಸಿದ್ದಗೊಳಿಸಬೇಕು ಎಂದು ತಿಳಿಸಿದರು. ತಾಲೂಕಾ ತ್ರೈಮಾಸಿಕ ಕೆಡಿಪಿ ಸಭೆಗೆ ಆಹಾರ ಇಲಾಖೆಯ ಅಧಿಕಾರಿಗಳು ಮಾಹಿತಿಯಿಲ್ಲದೇ ಸಭೆಗೆ ಗೈರಾಗಿದ್ದರು. ಅಧಿಕಾರಿಯ ಬದಲು ಇಲಾಖೆಯ ಆಹಾರ ಶಿರಸ್ತೆದಾರರು ಆಗಮಿಸಿದ್ದರು. ಅಧಿಕಾರಿ ಎಲ್ಲಿ ಎಂದು ಶಾಸಕ ದದ್ದಲ್ ಪ್ರಶ್ನಿಸಿದಾಗ ಬಂದಿಲ್ಲ ಎಂದು ಉತ್ತರಿಸಿದರು. ನಂತರ ಕಳೆದ ಸಭೆಯಲ್ಲಿ ನಾವು ಕೇಳಿದ ಪ್ರಶ್ನೆಗಳ ಕುರಿತು ಮಾಹಿತಿಇದೆಯೇ ಎಂದು ದದ್ದಲ್ ಮರು ಪ್ರಶ್ನಿಸಿದಾಗ ಗೊತ್ತಿದೆ ಎಂದು ಹೇಳಿದ ಸಿಬ್ಬಂದಿ ಉತ್ತರಿಸಲು ತಡಬಡಿಸಿದರು. ಆಗ ಶಾಸಕ ಬಸನಗೌಡ ದದ್ದಲ್ ಆಹಾರ ಇಲಾಖೆಯ ಅಧಿಕಾರಿಗೆ ನೋಟಿಸ್ ನೀಡಿ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗೆ ಸೂಚನೆ ನೀಡಿದರು.ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನಗೌಡ, ಆರ್‌ಎಪಿಎಂಸಿ ಅಧ್ಯಕ್ಷ ಜಯಂತರಾವ್ ಪತಂಗೆ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪವನ್ ಕಿಶೋರ ಪಾಟೀಲ್, ನಾಮನಿರ್ದೇಶಿತ ಸದಸ್ಯರಾದ ಈರೇಶ, ತಿಮ್ಮಪ್ಪ ನಾಯಕ, ಜಿಂದಪ್ಪ, ಶರಣಬಸವ, ರಾಯಚೂರು ವಿವಿ ಸಿಂಡಿಕೇಟ್ ಸದಸ್ಯ ಚನ್ನಬಸವ, ಎಪಿಎಂಸಿ ಉಪಾಧ್ಯಕ್ಷ ಬಸೀರ್ ಅಹ್ಮದ್, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್, ತಾಲೂಕು ಪಂಚಾಯತ್ ಆಡಳಿತಾಧಿಕಾರಿ ವನಿತಾ, ಡಿವೈಎಸ್‌ಪಿ ಶಾಂತವೀರ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ಅನೇಕರಿದ್ದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L